ವಿಜಯಪುರ | ಸಂಪುಟ 01 | ಸಂಚಿಕೆ 315 | ಪುಟ 4 | ₹ 3.00

https://udayarashminews.com

udayarashmi 7026028778

# ಉದಯ ರಶ್ಮಿ

Udayarashmi Kannada Daily

ಜನಪರ-ಜೀವಪರ

ಕನ್ನಡ ದಿನಪತ್ರಿಕೆ

ಸಂಪಾದಕ : ಇಂದುಶೇಖರ ಮಣೂರ

editor.udayarashmi@gmail.com RNI NO: KARKAN/2023/86203 ಭಾನುವಾರ, ಫೆಬ್ರವರಿ 11, 2024




"ಈಶ್ವರಪ್ಪನವರ ಗುಂಡಿನ ಬೆದರಿಕೆಗೆ ಹೆದರುವ ರಕ್ತ ಡಿ.ಕೆ. ಸುರೇಶ್ ಅವರ ಮೈಯಲ್ಲಿ ಹರಿಯುತ್ತಿಲ್ಲ. ನಮ್ಮ ಸುದ್ದಿಗೆ ಬಂದವರಿಗೆ ಒಂದೊಂದೇ ಹಂತದಲ್ಲಿ ಸೆಟ್ಲಮೆಂಟ್ ಆಗಿದೆ."

– ಡಿ.ಕೆ. ಶಿವಕುಮಾರ್
ಉಪ ಮುಖ್ಯಮಂತ್ರಿಗಳು

### ಪ್ರೊ.ಎಂ.ಡಿ.ನಂಜುಂಡಸ್ವಾಮಿ ಜನ್ಮ ದಿನಾಚರಣೆ । ರೈತ ಸಮಾವೇಶ ಉದ್ಘಾಟಿಸಿದ ಸಿಎಂ ಸಿದ್ದರಾಮಯ್ಯ ಭರವಸೆ

# ಬಿಜೆಪಿ ತಂದಿದ್ದ ಭೂ ಸುಧಾರಣಾ ಕಾಯ್ದೆಗೆ ತಿದ್ದುಪಡಿ!

ಬೆಂಗಳೂರು: ರೈತರು ನೀಡಿದ ಹಕ್ಕೊತ್ತಾಗಳನ್ನು ಗಂಭೀರವಾಗಿ ಪರಿಗಣಿಸಿ, ಕೇಂದ್ರದ ಬಿಜೆಪಿ ಸರ್ಕಾರ ಜಾರಿ ಮಾಡಿರುವ ರೈತ ವಿರೋಧಿ "ಭೂ ಸುಧಾರಣಾ ಕಾಯ್ದೆ 2020"ಕ್ಕೆ ತಿದ್ದುಪಡಿ ತರಲಾಗುವುದು ಎಂದು ಮುಖ್ಯಮಂತ್ರಿ ಸಿದ್ದರಾಮಯ್ಯ ಭರವಸೆ ನೀಡಿದರು.

ಕರ್ನಾಟಕ ರಾಜ್ಯ ರೈತ ಸಂಘ ಫ್ರೀಡಂಪಾರ್ಕ್ ನಲ್ಲಿ ರೈತ ನಾಯಕ ಪ್ರೊ.ಎಂ.ಡಿ.ನಂಜುಂಡಸ್ವಾಮಿ ಅವರ 88ನೇ ಜನ್ಮ ದಿನಾಚರಣೆ ಪ್ರಯುಕ್ತ ಆಯೋಜಿಸಿದ್ದ ರೈತ ಸಮಾವೇಶವನ್ನು ಉದ್ಘಾಟಿಸಿದ ಬಳಿಕ ರೈತ ಪರ ಬಜೆಟ್ ರೂಪಿಸಲು ರೈಸ ಸಂಘ ನೀಡಿದ ಹಕ್ಕೊತ್ತಾಯಗಳನ್ನು ಸ್ವೀಕರಿಸಿ ಮಾತನಾಡಿದ ಅವರು, ನಂಜುಂಡಸ್ವಾಮಿಯವರು ಸಂಘಟಿಸಿದ ಸ್ಟಡಿ ಸರ್ಕಲ್ ಮೂಲಕ ಹಲವು ವಿಚಾರಗಳ ಒಳನೋಟ ದೊರೆಯಿತು. ಸಮಾಜವಾದಿ ಆರ್ಥಿಕತೆ, ಸಮಾಜವಾದಿ ರಾಜಕಾರಣದ ಬಗ್ಗೆ ಸ್ಪಷ್ಟತೆ ಸಿಕ್ಕಿತು. ಈ



ಸ್ಟಡಿ ಸರ್ಕಲ್ ಗೆ ಬಹಳ ಮಂದಿ ಉಪನ್ಯಾಸಕರು, ಪ್ರೊಫೆಸರ್ ಗಳು, ಸಾಹಿತಿಗಳು ಬರುತ್ತಿದ್ದರು. ಇವರೆಲ್ಲರ ಮಸರ್ಗದರ್ಶನ ನನಗೆ ಅನುಕೂಲವಾಯಿತು ಎಂದರು.

ನಂಜುಂಡಸ್ವಾಮಿಯವರು ಕಡೆಯವರೆಗೂ ರೈತರ ಪರವಾಗಿ ಕ್ರಿಯಾಶೀಲವಾಗಿದ್ದರು. ಸಮಾಜವಾದಿ ಆಶಯಗಳ ಪರವಾಗಿದ್ದ ಇವರು ಬೆಳೆಸಿದ ರೈತ ಚಳವಳಿ ರೈತರ ಸಮಸ್ಯೆ ಪರಿಹಾರಕ್ಕೆ ಆಸರೆ ಆಯಿತು. ರೈತ ಹೋರಾಟ ಮತ್ತು ರೈತ ಸಮಾವೇಶಗಳಲ್ಲಿ ಭಾಗವಹಿಸುವುದು ನನಗೂ ಬಹಳ ಸಂತಸ ಮತ್ತು ಹೆಮ್ಮೆಯ ವಿಷಯ. ನಂಜುಂಡಸ್ವಾಮಿ ಮತ್ತು ರೈತ ಹೋರಾಟ ಸಮಾಜ ಮತ್ತು ಸರ್ಕಾರಗಳ ಮೇಲೆ ಪರಿಣಾಮ ಬೀರಿದೆ ಎಂದರು.

ಬಡಗಲಾಪುರ ನಾಗೇಂದ್ರ ಅವರು ಅಧ್ಯಕ್ಷತೆ ವಹಿಸಿದ್ದ ರೈತ ಸಮಾವೇಶದಲ್ಲಿ ಸಮಾಜ ಕಲ್ಯಾಣ ಇಲಾಖೆ ಸಚಿವ ಹೆಚ್.ಸಿ.ಮಹದೇವಪ್ಪ, ಮುಖ್ಯಮಂತ್ರಿಗಳ ರಾಜಕೀಯ ಸಲಹೆಗಾರರಾದ ಆಳಂದ ಶಾಸಕ ಬಿ.ಆರ್. ಪಾಟೀಲ್, ರಾಜಕೀಯ ಕಾರ್ಯದರ್ಶಿ ಗೋವಿಂದರಾಜು, ಶಾಸಕರಾದ ದರ್ಶನ್ ಪುಟ್ಟಣ್ಣಯ್ಯ, ದಲಿತ ಮುಖಂಡ ಮಾವಳ್ಳಿ ಶಂಕರ್, ಹಿಂದುಳಿದ ಮತ್ತು ಶೋಷಿತ ಸಮುದಾಯಗಳ ಒಕ್ಕೂಟದ ಅಧ್ಯಕ್ಷರಾದ ರಾಮಚಂದ್ರಪ್ಪ, ಭೂಮಿ ಮತ್ತು ವಸತಿ ಹಕ್ಕು ವಂಚಿತರ ಹೋರಾಟ ಸಮಿತಿ ಸಂಚಾಲಕರಾದ ಕುಮಾರ್ ಸಮತಳ ಸೇರಿ ಹಲವು ಸಂಘಟನೆಗಳ ಮುಖಂಡರು ಉಪಸ್ಥಿತರಿದ್ದರು.

## ರಾಜ ನುಡಿ

ಬದುಕಲ್ಲಿ ಸೋತೆ ಎಂದು ಕೊಂಡವರಿಗೊಂದು ಕಿವಿಮಾತು 'ಸೋಲು ನಮ್ಮ ಮುಂದಿರುವ ಗೆಲುವನ್ನು ತೋರಿಸುವ ಮೈಲಿಗಲ್ಲೇ ಹೊರತು ಅಂತ್ಯ ಹಾಡಿದ ಗೋರಿಯ ಮೇಲಿಟ್ಟ ಕಲ್ಲಲ್ಲ. ನೆನಪಿರಲಿ "ಸೋಲದೆ ಗೆದ್ದರೆ ಮಂದಹಾಸ. ಸೋತು ಗೆದ್ದರೆ ಇತಿಹಾಸ".

–ಡಾ. ರಾಜಶೇಖರ ನಾಗೂರ

## ಸದನದಲ್ಲಿ ಶಾಸಕರು ರೈತರ ಪರ ಧ್ವನಿ ಎತ್ತಲು ಸಗರ ಆಗ್ರಹ

ಉದಯರಶ್ಮಿ ನ್ಯೂಸ್

ವಿಜಯಪುರ: ಹಿಂದೆಂದೂ ಕಂಡು ಕಾಣದಂತಹ ಬೀಕರ ಬರಗಾಲ ನಮ್ಮ ರಾಜ್ಯಕ್ಕೆ ಒಕ್ಕರಿಸಿದೆ. ಕಳೆದ 7–8 ತಿಂಗಳಿನಿಂದ ಮಳೆ ಕಾಣದೇ ಕಂಗಾಲಾಗಿರುವ ರೈತ ಸಮುದಾಯವನ್ನು ಗಣನೆಗೆ ತೆಗೆದುಕೊಂಡು ನಾಳೆ ನಡೆಯಲಿರುವ ಬಜೆಟ್ ಪೂರ್ವ ಅಧಿವೇಶನದಲ್ಲಿ ಜಿಲ್ಲೆಗೆ ಸಂಬಂಧಿಸಿದ ಎಲ್ಲಾ 8 ಶಾಸಕರುಗಳು ರೈತರ ಪರವಾಗಿ ಧ್ವನಿ ಎತ್ತಿ ರೈತರ ಮತದಿಂದ ಆರಿಸಿ ಬಂದಿರುವ ತಾವುಗಳು ಅವರ ಋಣ ತೀರಿಸಬೇಕೆಂದು ಕರ್ನಾಟಕ ರಾಜ್ಯ ರೈತ ಸಂಘ ಹಾಗೂ ಹಸಿರು ಸೇನೆಯ ಜಿಲ್ಲಾಧ್ಯಕ್ಷ ಸಂಗಮೇಶ ಸಗರ ಅವರು ಪತ್ರಿಕೆ ಮೂಲಕ ಆಗ್ರಹಿಸಿದ್ದಾರೆ.

ಅಧಿವೇಶನವೆಂದರೆ ಕೇವಲ ಜಗಳವಾಡುವುದು ಆಗಬಾರದು, ಜಿಲ್ಲೆಗೆ ಹಾಗೂ ಜಿಲ್ಲೆಯ ರೈತರಿಗೆ ಅವಶ್ಯವಾಗಿ ಬೇಕಾಗಿರುವ ಹೊಸ ಯೋಜನೆಗಳ ಕುರಿತು, ಹಾಗೆಯೇ ಹಿಂದೆ ನೆನಗುದಿಗೆ ಬಿದ್ದಿರುವ ಕಾಮಗಾರಿಗಳ ಹಣವನ್ನು



ಮಂಜೂರು ಮಾಡುವಂತೆ ಜಿಲ್ಲೆಯ 8 ಶಾಸಕರು ಸದನದಲ್ಲಿ ಧ್ವನಿ ಎತ್ತಬೇಕೆಂದು ತಿಳಿಸಿದ್ದಾರೆ.

ಜಿಲ್ಲೆಯಲ್ಲಿ ಅನೇಕ ರೈತರು ಆತ್ಮಹತ್ಯ ಮಾಡಿಕೊಂಡಿದ್ದಾರೆ, ರೈತರ ಬಗ್ಗೆ ಕೇವಲ ಬಾಯಿ ಮಾತಿನಲ್ಲಿ ಕನಿಕರ ತೊರದೇ ಬರಗಾಲದಿಂದ ತತ್ತರಿಸಿರುವ ರೈತರ ಸಂಪೂರ್ಣ ಸಾಲ ಮನ್ನಾ ಮಾಡಬೇಕು, ಬೆಳೆದಿರುವ ಎಲ್ಲಾ ಬೆಳೆಗಳಿಗೆ ವರ್ಷಪೂರ್ತಿ ಬೆಂಬಲ ಬೆಲೆ ನೀಡಿ ಖರೀದಿಸಬೇಕು. ಕೃಷಿಗೆ ಬಡ್ಡಿ ರಹಿತ ಬೇಷರತ್ತ ಸಾಲ ಸಿಗುವಂತಾಗಬೇಕು, ಕೃಷಿ ಚಟುವಟಿಕೆ ನಡೆಯದೇ ರೈತ ಕಾರ್ಮಿಕರು ಗುಳೆ ಹೋಗುತ್ತಿರುವುದನ್ನು ತಪ್ಪಿಸಲು ಉದ್ಯೋಗ ಸೃಷ್ಟಿಸಬೇಕು, ರೈತರಿಗೆ ಸಂಬಂಧಿಸಿದ ಕೃಷಿ, ಅರಣ್ಯ, ತೋಟಗಾರಿಕೆ, ಮೀನು, ಪಶುಸಂಗೋಪನೆ, ಇಲಾಖೆಯಲ್ಲಿ ಅವಶ್ಯವಿರುವ ಎಲ್ಲಾ ಸಾಧನ ಸಲಕರಣೆಗಳು, ಬೀಜ, ಗೊಬ್ಬರ, ಸ್ಪಿಂಕಲರ್ ಪೈಪ ಸೇರಿದಂತೆ ಎಲ್ಲ ಉಪಕರಣಗಳು ದೊರೆಯಬೇಕು ಜೊತೆಗೆ ಖಾಲಿ ಇರುವ ಹುದ್ದೆಗಳನ್ನು ತುಂಬಿಕೊಳ್ಳಬೇಕು ಎಂದರು.

ಆಲಮಟ್ಟಿ ಆಣೆಕಟ್ಟು 519.6 ರಿಂದ 524.256ಕ್ಕೆ ಎತ್ತರಿಸಿ, ಪರಿಹಾರ ಹಾಗೂ ಪುರ್ನವಸತಿ ಕಲ್ಪಿಸಬೇಕು, ಜೊತೆಗೆ ಜಿಲ್ಲೆಯಲ್ಲಿ ನಡೆಯುತ್ತಿರುವ ಎಲ್ಲಾ ಏತ ನೀರಾವರಿ ಯೋಜನೆಗಳನ್ನು ಗುಣಮಟ್ಟದಿಂದ ನಿರ್ಮಿಸಿ, ಜಿಲ್ಲೆಯ ಕಡೆಯ ಹಳ್ಳಿಯ ಕಟ್ಟಕಡೆಯ ರೈತರ ಜಮೀನಿಗೂ ನೀರು ಹರಿಯಬೇಕು.

ರೈತರಿಗೆ ಮರಣ ಶಾಸನವಾಗಿರುವ ಭೂ ಸುಧಾರಣಾ ಕಾಯ್ದೆ, ಕೃಷಿ ಕಾಯ್ದೆ, ಎ.ಪಿ.ಎಂ.ಸಿ ಕಾಯ್ದೆ, ಜಾನುವಾರ ಹತ್ಯೆ, ತಂದಿರುವ ಕೇಂದ್ರ ಹಾಗೂ ರಾಜ್ಯ ಬಿ.ಜೆ.ಪಿ ಸರಕಾರ ತಂದಿರುವುದನ್ನು ದೇಶದ ಎಲ್ಲಾ ರೈತರು ವಿರೋಧಿಸಿರುವ ಪ್ರತಿಫಲವಾಗಿ ಕೇಂದ್ರದಲ್ಲಿ ಮರಳಿ ಪಡೆದಿದ್ದರೂ ರಾಜ್ಯ ಸರಕಾರಗಳು ಇನ್ನು ಮರಳಿ ಪಡೆದಿಲ್ಲ, ಅಧಿಕಾರಕ್ಕೆ ಬರುವ ಮುಂಚೆ ರೈತರಿಗೆ ನೀಡಿರುವ ಆಶ್ವಾಸನೆಯಂತೆ ಕೂಡಲೆ ಈ ಅಧಿವೇಶನದಲ್ಲಿ ಈ ಎಲ್ಲಾ ಕಾಯ್ದೆಗಳನ್ನು ವಾಪಸು ಪಡೆಯಬೇಕು.

ಸರಿಸುಮಾರು 75% ರೈತರು ಕೃಷಿಯನ್ನೆ ಅವಲಂಭಿಸಿರುವ ಈ ರಾಜ್ಯದಲ್ಲಿ ರೈತಪರ ಚಿಂತನೆಗಳನ್ನು ಮಾಡಿ ತಜ್ಞರಿಂದ, ಹಿರಿಯ ರೈತ ಹೋರಾಟಗಾರರಿಂದ ಮಾರ್ಗದರ್ಶನ ಪಡೆದು ರೈತಪರ ಬಜೆಟ್ ಮಂಡನೆ ಮಾಡಬೇಕೆಂದು ರಾಜ್ಯದ ಮುಖ್ಯಮಂತ್ರಿಗಳಲ್ಲಿ ಸಮಸ್ತ ರೈತ ಬಾಂಧವರ ಪರವಾಗಿ ಸಗರ ಅವರು ಆಗ್ರಹಿಸಿದ್ದಾರೆ.


## ಜಾವಲಿನ್ ಥ್ರೋ ದಲ್ಲಿ ಪೂಜಾ ಠಾಕೂರ ಚಿನ್ನದ ಪದಕ




ಉದಯರಶ್ಮಿ ನ್ಯೂಸ್

ವಿಜಯಪುರ: ಕರ್ನಾಟಕ ರಾಜ್ಯ ಅಕ್ಕ ಮಹಾದೇವಿ ವಿಶ್ವ ವಿದ್ಯಾನಿಲಯ ವಿಜಯಪುರ ಅಧೀನದಲ್ಲಿ ಬರುವ ಕಾಲೇಜುಗಳ 17ನೇ ಅಂತರ್ ವಿಶ್ವವಿದ್ಯಾಲಯಗಳ ಅಥ್ಲೇಟಿಕ್ಸ್ ಕ್ರೀಡಾಕೂಟದಲ್ಲಿ ವಿಜಯಪುರ ಸರಕಾರಿ ಪ್ರಥಮ ದರ್ಜೆ ಮಹಿಳಾ ಕಾಲೇಜಿನ ಬಿ.ಎ 3ನೇ ಸೆಮಿಸ್ಟರ್ ನ ವಿದ್ಯಾರ್ಥಿನಿ ಪೂಜಾ ಠಾಕೂರ ಜಾವಲಿನ್ ಥ್ರೋ( ಬರ್ಚಿ ಎಸೆತ )ದಲ್ಲಿ 27.33 ಮೀಟರ್ ಎಸೆದು ಬಂಗಾರದ ಪದಕ ಪಡೆದಿರುತ್ತಾಳೆ. ಕಾಲೇಜಿನ ಇನ್ನೋರ್ವ ಬಿ ಎ 3ನೇ ಸೆಮಿಸ್ಟರ್ ವಿದ್ಯಾರ್ಥಿನಿ ದೀಪ ಚವ್ಹಾಣ್ 20 ಕಿ. ಮೀ. ನಡುಗೆ ಸ್ಪರ್ಧೆಯಲ್ಲಿ ಕಂಚಿನ ಪದಕದೊಂದಿಗೆ ಮೂರನೇ ಸ್ಥಾನ ಪಡೆದಿರುತ್ತಾಳೆ ಹಾಗೂ ಕಾಲೇಜಿನ ಮತ್ತೋರ್ವ ವಿದ್ಯಾರ್ಥಿನಿ ಲಕ್ಷ್ಮಿ ಕ್ಷತ್ರಿ1500 ಮೀಟರ್ ಓಟದ ಸ್ಪರ್ಧೆಯಲ್ಲಿ ನಾಲ್ಕನೇ ಸ್ಥಾನ ಪಡೆದಿರುತ್ತಾಳೆ.

ಈ ಕ್ರೀಡೆಗಳಲ್ಲಿ ಸಾಧನೆ ಮಾಡಿ ಕಾಲೇಜಿನ ಕೀರ್ತಿಯನ್ನು ಹೆಚ್ಚಿಸಿದ್ದಕ್ಕಾಗಿ ಈ ಮೂವರು ವಿದ್ಯಾರ್ಥಿನಿಯರನ್ನು ಕಾಲೇಜಿನ ಪ್ರಾಂಶುಪಾಲರಾದ ಡಾ. ಆರ್ ಎಸ್ ಕಲ್ಲೂರಮಠ, ದೈಹಿಕ ಶಿಕ್ಷಣ ನಿರ್ದೇಶಕರಾದ ಡಾ. ರಾಜಶೇಖರ ಬೆನಕನಹಳ್ಳಿ, ಐ. ಕ್ಯೂ.ಎ.ಸಿ ಸಂಯೋಜಕರಾದ ಡಾ. ಚಿದಾನಂದ ಎಸ್. ಆನೂರ ಹಾಗೂ ಕಾಲೇಜಿನ ಬೋಧಕ –ಬೋಧಕೇತರ ಸಿಬ್ಬಂದಿ ಮತ್ತು ಕಾಲೇಜು ಅಭಿವೃದ್ಧಿ ಸಮಿತಿ ಸದಸ್ಯರು ಅಭಿನಂದಿಸಿ ಹರ್ಷ ವ್ಯಕ್ತಪಡಿಸಿದ್ದಾರೆ.



## ವಚನ ಚಿಂತನ 299

*ಮದ್ದ ನಂಬಿಕೊಂಡಡೆ ರೋಗ ಮಾಣದಿಪ್ಪುದೆ ?*

*ಮದ್ದ ನಂಬಿಕೊಂಡಡೆ ರೋಗ ಮಾಣದಿಪ್ಪುದೆ ?*
*ಸಜ್ಜನಿಕೆಯುಳ್ಳಡೆ ಪ್ರಸಾದಕಾಯ ಕೆಡುವುದೆ ?*
*ಪ್ರಾಣ, ಲಿಂಗವಾದಡೆ ಪ್ರಾಣ ಬೇರಪ್ಪುದೆ ?*
*ಪ್ರಾಣಲಿಂಗ ಪ್ರಸಾದವನು ತಿಳಿದು ನೀವು ನೋಡಿರೆ,*
*ನಾದ ಬಿಂದು ಸೂಸದ ಮುನ್ನ,*
*ಆದಿಯ ಪ್ರಸಾದವ ಭೇದಿಸಿಕೊಂಡರು*
*ಗುಹೇಶ್ವರಾ ನಿಮ್ಮ ಶರಣರು.*
*– ಅಲ್ಲಮಪ್ರಭುಗಳು*

ಬಸವಾದಿ ಶರಣರು ರೋಗಗಳ ಬಗ್ಗೆ ವೈಜ್ಞಾನಿಕ ಅರಿವನ್ನು ಹೊಂದಿದ್ದರು ಎಂಬುದಕ್ಕೆ ಈ ವಚನದಲ್ಲಿ ಅಲ್ಲಮಪ್ರಭುಗಳು ಅನೇಕ ಸಾಕ್ಷಿಗಳನ್ನು ತೆರೆದಿಟ್ಟಿದ್ದಾರೆ. ರೋಗಗಳ ಉಗಮ ಮತ್ತು ಹರಡುವಿಕೆಗೆ ದೈವಶಕ್ತಿಯೇ ಕಾರಣವೆಂದು ಅದರ ಸಂತೃಪ್ತಿಗಾಗಿ ಪ್ರಾಣಿಬಲಿಯಂತಹ ಮೂಢ ಆಚರಣೆಗಳನ್ನು ಆಚರಿಸುವ ಆ ಕಾಲಘಟ್ಟದಲ್ಲಿ ಅಂತಹ ನಂಬಿಕೆಯನ್ನು ಹೊಡೆ ದೋಡಿಸಿ ರೋಗನಿವಾರಣೆಗೆ ಸೂಕ್ತ ಮುದ್ದು ಪಡೆಯುವಂತೆ ಜನರಲ್ಲಿ ಜಾಗೃತಿ ಮೂಡಿಸಿರುವುದನ್ನು ವಚನದ ಪ್ರಾರಂಭದ ಸಾಲಿನಲ್ಲಿ ನಾವು ಕಾಣುತ್ತೇವೆ. "ಮದ್ದ ನಂಬಿಕೊಂಡಡೆ ರೋಗ ಮಾಣದಿಪ್ಪುದೆ ?" ಎನ್ನುವಲ್ಲಿ ತಾವು ಸೇವಿಸುವ ಮದ್ದು/ಔಷದ ಬಗ್ಗೆ ನಂಬಿಕೆ ತಾಳುವಂತೆ ಸೂಚಿಸಿದ್ದಾರೆ. ರೋಗನಿವಾರಣೆ ಕಾರ್ಯದಲ್ಲಿ ಔಷಧದ ಬಗ್ಗೆ ರೋಗಿ ತಾಳುವ ಧನಾತ್ಮಕ ನಂಬಿಕೆಯು ಸಾಕಷ್ಟು ಪರಿಣಾಮ ಬೀರುತ್ತದೆ ಎಂಬುದನ್ನು ವೈದ್ಯರು ಒಪ್ಪಿಕೊಂಡಿದ್ದಾರೆ. ನಮ್ಮ ಆಚಾರ–ವಿಚಾರಗಳು ಉತ್ತಮವಾಗಿದ್ದರೆ ಯಾವುದೇ ರೋಗಗಳು ಬಾಧಿಸುವುದಿಲ್ಲ ಎಂಬುದನ್ನು "ಸಜ್ಜನಿಕೆಯುಳ್ಳಡೆ ಪ್ರಸಾದಕಾಯ ಕೆಡುವುದೆ?"ಎಂದು ಪ್ರಶ್ನಿಸುವುದರ ಮೂಲಕ ನಡೆ–ನುಡಿ ಸೂಚಿಯಾಗಿರುವಂತೆ ಸಲಹೆ ನೀಡಿದ್ದಾರೆ. ಕಾಯವನ್ನು ಪ್ರಸಾದಕಾಯ ಮಾಡಿಕೊಂಡಾಗ ಕಾಯಕ್ಕೆ ತಗುಲುವ ರೋಗರುಜಿನಗಳು ಕಡಿಮೆಯಾಗಿ ಪ್ರಾಣವು ಪರಿಶುದ್ಧವಾಗುವದು ಪರಿಣಾಮವಾಗಿ ಗುಹೇಶ್ವರನ ಶರಣರು ಅಂಗಭಾವವನ್ನು ಅಳಿದು ಲಿಂಗ ಭಾವದಲ್ಲಿ ನಿಶ್ಚಿಂತರಾಗಿದ್ದರು ಎಂದಿದ್ದಾರೆ. ಯಾವುದೇ ರೋಗಗಳ ಬಗ್ಗೆ ಆತಂಕಗೊಳ್ಳದೆ ಸೂಕ್ತ ಚಿಕಿತ್ಸೆಯನ್ನು ಪಡೆದು ಮುದ್ದು ಸೇವಿಸಿದರೆ ಅಂಗಕ್ಕೆ ಬರುವ ರೋಗಗಳು ನಿವಾರಣೆಯಾಗುತ್ತವೆ ಎಂಬುದೇ ಈ ವಚನದ ಆಶಯವಾಗಿದೆ.

-ರುದ್ರೇಶ ಕಿತ್ತೂರ, ಮುದ್ದೇಬಿಹಾಳ

### ಸಾವು–ಬದುಕಿನ ಹೋರಾಟದಲ್ಲಿ ಮಂಜುನಾಥ ಬೂದಿಹಾಳ । ಚಿಕಿತ್ಸೆಗೆ ರೂ.15ಲಕ್ಷ ನೆರವಿನ ಅಗತ್ಯ

# ಮಂಜುನಾಥನ ಕಿಡ್ನಿ ಸಮಸ್ಯೆಗೆ ದಾನಿಗಳ ನಿರೀಕ್ಷೆ

ಉದಯರಶ್ಮಿ ನ್ಯೂಸ್

– ಇಂದುಶೇಖರ ಮಣೂರ

ವಿಜಯಪುರ: ಕೇವಲ ಜ್ವರ ಬಂದರೇನೇ ಆಸ್ಪತ್ರೆಗಳಲ್ಲಿ ಸಾವಿರ–ಸಾವಿರ ಪೀಕುವ ಈ ದಿನಗಳಲ್ಲಿ ಗಂಭೀರ ಆರೋಗ್ಯ ಸಮಸ್ಯೆ ತಲೆದೋರಿದರೆ ಲಕ್ಷ–ಲಕ್ಷ ಹಣ ಚೆಲ್ಲಬೇಕು. ದುಡ್ಡಿರುವ ಶ್ರೀಮಂತರೇನೋ ಹೈಟೆಕ್ ಆಸ್ಪತ್ರೆಗಳಲ್ಲಿ ನೀರಿನಂತೆ ಹಣ ಖರ್ಚುಮಾಡಿ ಗುಣಮುಖರಾಗ್ತಾರೆ. ಆದರೆ ತಮ್ಮ ದೈನಂದಿನ ತುತ್ತಿನ ಚೀಲ ತುಂಬಿಸಿಕೊಳ್ಳಲೇನೇ ಹೆಣಗುವ ಬಡ ಕುಟುಂಬಗಳಿಗೆ ಗಂಭೀರ ಆರೋಗ್ಯ ಸಮಸ್ಯೆ ತಲೆದೋರಿದರೆ ಅವರೆಲ್ಲಿ ಹೋಗಬೇಕು?

ಈಗ ಇಂತಹದ್ದೇ ಸಂಕಷ್ಟದ ಪ್ರಕರಣವೊಂದು ವಿಜಯಪುರ ಜಿಲ್ಲೆಯ ಸಿಂದಗಿಯಲ್ಲಿ ಬೆಳಕಿಗೆ ಬಂದಿದೆ. ಪಟ್ಟಣದ ಮಂಜುನಾಥ ಕಾಳಪ್ಪ ಬೂದಿಹಾಳ ಎಂಬ ನತದೃಷ್ಟ ಯುವಕನ ಎರಡೂ ಕಿಡ್ನಿಗಳು ವಿಫಲಗೊಂಡು ಈಗ ಸಾವು–ಬದುಕಿನ ನಡುವೆ ಹೋರಾಟ ನಡೆಸುತ್ತಿದ್ದು, ಅವನ ಕುಟುಂಬವೀಗ ನಿತ್ಯ ಕಣ್ಣೀರಿನಲ್ಲಿ ಕೈ ತೊಳೆಯುವಂತಾಗಿದೆ.

ಮೂಲತ: ಸೊಂಪೂರ ಗ್ರಾಮದ, ಸಧ್ಯ ಸಿಂದಗಿ ಪಟ್ಟಣದಲ್ಲಿ ವಾಸವಿರುವ ಕಾಳಪ್ಪ ಬೂದಿಹಾಳ ದಂಪತಿಗೆ ಐದು ಜನ ಮಕ್ಕಳು. ಮಗ ಮಂಜುನಾಥ ಹೊರತುಪಡಿಸಿದರೆ ಉಳಿದವರು ಹೆಣ್ಣುಮಕ್ಕಳು. ತಂದೆ ಕಾಳಪ್ಪ ಪೆಟ್ರೋಲ್ ಬಂಕ್ ನಲ್ಲಿ ಕೆಲಸಮಾಡುತ್ತಿದ್ದು, ತಮಗೆ ದೊರೆವ ಮಾಸಿಕ ರೂ.6000/– ಸಂಬಳದಲ್ಲೇ ಕುಟುಂಬದ 7 ಜನರ ನಿರ್ವಹಣೆ ಮಾಡಬೇಕು. 10 × 20 ಅಳತೆಯ ಕುರಿದೊಡ್ಡಿಯಂತಹ ಬಾಡಿಗೆ ಕೋಣೆಯೊಂದರಲ್ಲಿಯೇ ಇವರ ವಾಸ.

ಬಡತನದ ಬವಣೆಯಲ್ಲಿ ಹಾಗೂ–ಹೀಗೂ ಪಿಯುಸಿವರೆಗೆ ಓದಿದ ಮಂಜುನಾಥ, ಕುಟುಂಬದ ಆರ್ಥಿಕ ಸಂಕಷ್ಟದಿಂದಾಗಿ ಓದು ಮುಂದುವರೆಸಲಾಗದೆ ಅಲ್ಪ ಸಂಬಳದ ಖಾಸಗಿ ಕೆಲಸಕ್ಕೆ ಸೇರಿ ತಂದೆಯ ನೆರವಿಗೆ ನಿಂತಿದ್ದ.

ಆದರೀಗ ತನ್ನ ಏಕೈಕ ಸುಪುತ್ರ ಮಂಜುನಾಥನ ಎರಡೂ ಕಿಡ್ನಿಗಳು ಫೇಲ್ ಆಗಿದ್ದರಿಂದ ತಂದೆ ಕಾಳಪ್ಪಗೆ ಆಕಾಶವೇ ಕಳಚಿ ಬಿದ್ದಂತಾಗಿದೆ. ಈಗ ಮಗನಿಗೆ ವಾರಕ್ಕೆರಡು ಬಾರಿ ವಿಜಯಪುರ ನಗರಕ್ಕೆ ಹೋಗಿ ಡಯಾಲಿಸಿಸ್ ಮಾಡಿಸಲು ಸುಮಾರು ರೂ.ಐದು ಸಾವಿರ ಖರ್ಚು ಮಾಡುತ್ತಿದ್ದಾನೆ. ಈಗಾಗಲೇ ಆಸ್ಪತ್ರೆ ಖರ್ಚು ಹಾಗೂ ಡಯಾಲಿಸಿಸ್ ಗಾಗಿ ಕಾಳಪ್ಪ ಸಾಲ–ಸೋಲ ಮಾಡಿ ರೂ. ಎರಡು ಲಕ್ಷ ಖರ್ಚು ಮಾಡಿದ್ದಾನೆ. ಮಗನ ಆರೈಕೆಗಾಗಿ ಈಗ ತಾನೂ ಅನಿವಾರ್ಯವಾಗಿ ಕೆಲಸಕ್ಕೆ ಹೋಗಲಾಗದೆ ಮುಂದೆ ಹೇಗೆಂಬ ಚಿಂತೆಯಲ್ಲಿ ಅಸಹಾಯಕನಾಗಿ ತಲೆ ಮೇಲೆ ಕೈ ಹೊತ್ತು ಕುಳಿತಿದ್ದಾನೆ.

ಈಗ ಮಂಜುನಾಥನಿಗೆ ಕಿಡ್ನಿ ಹೊಂದಿಸಿ ಕಸಿ ಮಾಡಲು ರೂ.15ಲಕ್ಷಕ್ಕೂ ಅಧಿಕ ಹಣದ ಅವಶ್ಯಕತೆಯಿದೆ. ಇನ್ನು 30 ದಿನಗಳೊಳಗಾಗಿ ಕಿಡ್ನಿ ಕಸಿ ಮಾಡಿಸಲೇಬೇಕೆಂದು ಅವನಿಗೆ ಚಿಕಿತ್ಸೆ ನೀಡುತ್ತಿರುವ ಬಿಎಲ್ಡಿಇ ಆಸ್ಪತ್ರೆ ವೈದ್ಯರಾದ ಡಾ.ಸಂದೀಪ ಪಾಟೀಲ ಹಾಗೂ ಡಾ.ಆರ್.ಎಂ.ಹೊನ್ನುಟಗಿ ತಿಳಿಸಿದ್ದಾರೆ.

ಹೀಗಾಗಿ ಕಾಳಪ್ಪಗೆ ತಿಂಗಳೊಳಗಾಗಿ ರೂ.15/– ಲಕ್ಷ ಹೊಂದಿಸಲೇಬೇಕಾದ ಅನಿವಾರ್ಯತೆಗೆ ಸಿಲುಕಿದ್ದಾನೆ. ತನ್ನ ಏಕೈಕ ಮಗನ ಉಳಿವಿಗೆ ಸ್ಪಂದಿಸುವ, ಮಾನವೀಯ ನೆರವು ನೀಡುವ ದಾನಿಗಳ ನಿರೀಕ್ಷೆಯಲ್ಲಿದ್ದಾನೆ. ಈ



ಕುಟುಂಬದ ಆಸರೆಗೆ ದಾನಿಗಳು ಕೈಲಾದಷ್ಟು ಆರ್ಥಿಕ ಸಹಾಯ ನೀಡಿ ಮಾನವೀಯತೆ ಮೆರೆಯಬೇಕಿದೆ. ಈ ಕುಟುಂಬದ ನೋವಿಗೆ ನಾವೆಲ್ಲ ಸ್ಪಂದಿಸುವ ಜರೂರತ್ತಿದೆ.

**ಆರ್ಥಿಕ ಸಹಾಯ ಮಾಡಲಿಚ್ಛಿಸುವವರು ಈ ಕೆಳಕಂಡ ಖಾತೆಗೆ ಜಮೆ ಅಥವಾ ಫೋನ್ ನಂಬರಗೆ ಫೋನ್–ಪೇ ಮಾಡಬಹುದು.**

**Phonepay no: 8884461687 (manjunath kalappa Budihal)**

**ಬ್ಯಾಂಕ್ ವಿವರ**

**State bank of India,**
**Branch: Sindagi**
**Name: Kalappa B. Budihal (Sompur)**
**SB A/C NO: 30638176444**
**IFSC CODE: SBIN0001019**

# ಕಾಯಕ ಶರಣರ ಜೀವನ ಸಂದೇಶ ಅಳವಡಿಸಿಕೊಳ್ಳಿ :ಎಡಿಸಿ ಮುರಗಿ



ಉದಯರಶ್ಮಿ ನ್ಯೂಸ್

ವಿಜಯಪುರ: ನಾವು ಮಾಡುವ ಕೆಲಸವನ್ನು ನಿಷ್ಠೆಯಿಂದ, ಪ್ರೀತಿಯಿಂದ, ಪ್ರಾಮಾಣಿಕವಾಗಿ ಮಾಡಿದಾಗ ನಮಗೆ ಅದರಲ್ಲಿ ತೃಪಿ ಸಿಗುತ್ತದೆ ಎಂಬ ಸಂದೇಶ ಸಾರಿದ ಕಾಯಕ ಶರಣರ ಆದರ್ಶ ಜೀವನ ಸಂದೇಶ ನಮಗೆ ಪ್ರೇರಣೆಯಾಗಬೇಕು ಎಂದು ಅಪರ ಜಿಲ್ಲಾಧಿಕಾರಿ ಮಹದೇವ ಮುರಗಿ ಹೇಳಿದರು.

ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್ ಹಾಗೂ ಕನ್ನಡ ಮತ್ತು ಸಂಸ್ಕೃತಿ ಇಲಾಖೆಯಿಂದ ನಗರದ ಕಂದಗಲ್ ಶ್ರೀ ಹನುಮಂತರಾಯ ರಂಗಮಂದಿರದಲ್ಲಿ ಹಮ್ಮಿಕೊಂಡ ಕಾಯಕ ಶರಣ–ರಾದ ಮಾದರ ಚೆನ್ನಯ್ಯ, ಮಾದರ ಧೂಳಯ್ಯ, ಸಮಗಾರ ಹರಳಯ್ಯ, ಡೋಹರ ಕಕ್ಕಯ್ಯ, ಉರಿಲಿಂಗ ಪೆದ್ದಿ ಕಾಯಕ ಶರಣರ ಜಯಂತಿ ಕಾರ್ಯಕ್ರಮ ಉದ್ಘಾಟಿಸಿ ಅವರು ಮಾತನಾಡಿದರು.

ಕಾಯಕದಲ್ಲಿ ಯಾವುದೇ ಮೇಲು–ಕೀಳು ಎಂಬುದು ಇಲ್ಲ. ನಾವು ಮಾಡುವ ಕೆಲಸದಿಂದ ಸಮಾಜಕ್ಕೆ ಒಳಿತಾಗಬೇಕು. 12ನೇ ಶತಮಾನದ ಎಲ್ಲಾ ಶರಣರು ತಮ್ಮ ಕಾಯಕ ತತ್ವದಿಂದ ಸಮಾಜವನ್ನು ಸರಿದಾ–ರಿಗೆ ತರುವ ಪ್ರಯತ್ನ ಮಾಡಿದ್ದಾರೆ ಎಂದರು.

ವಿಜಯಪುರದ ಬಿ.ವಿ ದರಬಾರ ಪದವಿ ಪೂರ್ವ ಮಹಾವಿದ್ಯಾಲಯದ ಉಪನ್ಯಾಸಕರಾದ ಕಾಶಿನಾಥ ಕೋಣೆನವರ ಮಾದರ ಧೂಳಯ್ಯ ಹಾಗೂ ಸಮಗಾರ ಹರಳಯ್ಯ ಅವರ ಜೀವನ ಚರಿತ್ರೆ ಬಗ್ಗೆ ತಿಳಿಸಿಕೊಟ್ಟರು.

ತಾಳಿಕೋಟೆಯ ಎಸ್.ಕೆ. ಕಾಲೇಜಿನ ಸಹಾಯಕ ಪ್ರಾಧ್ಯಾಪಕರಾದ ಶ್ರೀಮತಿ ಸುಜಾತಾ ಚಲವಾದಿ ಅವರು ಮಾದರ ಚೆನ್ನಯ್ಯ , ಡೋಹರ ಕಕ್ಕಯ್ಯ, ಉರಿಲಿಂಗ ಪೆದ್ದಿ ಅವರ ಜೀವನ ಚರಿತ್ರೆಯ ಬಗ್ಗೆ ವಿಶೇಷ ಉಪನ್ಯಾಸ ನೀಡಿದರು.

ವೇದಿಕೆಯ ಮೇಲೆ ಜಿಲ್ಲಾ ಪಂಚಾಯತ್ ಮುಖ್ಯ ಲೆಕ್ಕಾಧಿಕಾ–ರಿಗಳಾದ ರಾಮಣ್ಣ ಅಥಣಿ, ಅಶೋಕ್ ಸೌದಾಗರ, ಭೀಮರಾಯ ಜಿಗಜಿಣಗಿ, ದಿಲೀಪ್ ಪೋಳ ಉಪಸ್ಥಿತರಿದ್ದರು.

ಶ್ರೀಮತಿ ಶ್ರೀದೇವಿ ಪತ್ತಾರ ಹಾಗು ಸಂಗಡಿಗರು ವಚನ ಗಾಯನ ನಡೆಸಿಕೊಟ್ಟರು. ಸಂಗೀತ ಮಠಪತಿ ನಿರೂಪಿಸಿದರು.

# ಫೆ.12ರಂದು ಡಾ.ಸಿಂಪಿ ಲಿಂಗಣ್ಣ ಜನ್ಮ ದಿನಾಚರಣೆ

ಉದಯರಶ್ಮಿ ನ್ಯೂಸ್

ವಿಜಯಪುರ: ಜಿಲ್ಲಾಡಳಿತ, ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಹಾಗೂ ಹಲಸಂಗಿ ಗೆಳೆಯರ ಪ್ರತಿಷ್ಠಾನದಿಂದ ಫೆ.12ರಂದು ಬನ್ಸಿಲಾಲ ವಿಠ್ಠಲದಾಸ ದರಬಾರ ಪದವಿ ಮಹಾವಿದ್ಯಾಲಯದಲ್ಲಿ ಬೆಳಗ್ಗೆ 10 ಗಂಟೆಗೆ ಡಾ. ಸಿಂಪಿ ಲಿಂಗಣ್ಣನವರ 119ನೇ ಜನ್ಮ ದಿನಾಚರಣೆ ಕಾರ್ಯಕ್ರಮ ಹಮ್ಮಿಕೊಳ್ಳಲಾಗಿದೆ.

ಈ ಕಾರ್ಯಕ್ರಮದ ಅಧ್ಯಕ್ಷತೆಯನ್ನು ವಿಜಯಪುರ ವಿದ್ಯಾವರ್ಧಕ ಸಂಘದ ಸಮನ್ವಯ ಅಧಿಕಾರಿ ಡಾ. ವ್ಹಿ.ಬಿ. ಗ್ರಾಮಪುರೋಹಿತ ಅವರು ವಹಿಸುವರು. ವಿಶೇಷ ಅತಿಥಿಗಳಾಗಿ



ಚಡಚಣದ ಶ್ರೀ ಸಂಗಮೇಶ್ವರ ಶಿಕ್ಷಣ ಸಂಸ್ಥೆಯ ಆಡಳಿತಾಧಿಕಾರಿ ಡಾ.ಎಸ್.ಎನ್. ಬೋರಗಿ ಭಾಗವಹಿಸಲಿದ್ದು, ಬಿ.ವಿ.ದರಬಾರ ಪದವಿ ಮಹಾವಿದ್ಯಾಲಯದ ಪ್ರಾಚಾರ್ಯ ಜಿ.ಎಸ್. ಮಣೂರ ಉಪಸ್ಥಿತರಿರುವರು. ಹಲಸಂಗಿ ಗೆಳೆಯರ ಪ್ರತಿಷ್ಠಾನದ ಅಧ್ಯಕ್ಷರಾದ ಜಿಲ್ಲಾಧಿಕಾರಿ ಟಿ.ಭೂಬಾಲನ್, ಹಲಸಂಗಿ ಗೆಳೆಯರ ಪ್ರತಿಷ್ಠಾನದ ಸದಸ್ಯ ಸಂಚಾಲಕರಾದ ಪ್ರೋ. ದೊಡ್ಡಣ್ಣ ಬ. ಬಜಂತ್ರಿ ಹಾಗೂ ಹಲಸಂಗಿ ಗೆಳೆಯರ ಪ್ರತಿಷ್ಠಾನದ ಸದಸ್ಯ ಕಾರ್ಯದರ್ಶಿ ಹಾಗೂ ಕನ್ನಡ ಮತ್ತು ಸಂಸ್ಕೃತಿ ಇಲಾಖೆಯ ಸಹಾಯಕ ನಿರ್ದೇಶಕರಾದ ಕರ್ಣಕುಮಾರ ಅವರು ಭಾಗವಹಿಸುವರು.

ಮಂಜುನಾಥ ಜುನಗೊಂಡ ಡಾ. ಸಿಂಪಿ ಲಿಂಗಣ್ಣನವರ ಜೀವನ ಹಾಗೂ ಸಾಧನೆಗಳ ಬಗ್ಗೆ ಉಪನ್ಯಾಸ ನೀಡಲಿದ್ದಾರೆ. ಶ್ರೀಮಂತ ಮಾದರ ಜಾನಪದ ಸಂಗೀತವನ್ನು ಪ್ರಸ್ತುತಪಡಿಲಿದ್ದಾರೆ.

# ರಾಷ್ಟ್ರೀಯ ಭಾವೈಕ್ಯತೆ ಮೂಡಿಸುವಲ್ಲಿ ಕ್ರೀಡೆಗಳು ಪ್ರಮುಖ



ಉದಯರಶ್ಮಿ ನ್ಯೂಸ್

ವಿಜಯಪುರ: ದೇಹ ಮತ್ತು ಮನುಸುಗಳನ್ನು ಒಂದುಗೂಡಿಸಿ ವಿದ್ಯಾರ್ಥಿಗಳನ್ನು ಕ್ರೀಡಾ ಸಾಧನೆಯ ಮಾರ್ಗದಲ್ಲಿ ಕೈ ಹಿಡಿದು ನಡೆಸುವ ಶಕ್ತಿ ಇರುವುದು ದೈಹಿಕ ಶಿಕ್ಷಣ ಶಿಕ್ಷಕರಲ್ಲಿ ಮಾತ್ರ ಎಂದು ರಾಜ್ಯ ಅಕ್ಕಮಹಾದೇವಿ ಮಹಿಳಾ ವಿಶ್ವವಿದ್ಯಾನಿಲಯ ಕುಲಸಚಿವರು ಮೌಲ್ಯ ಮಾಪನ ಪ್ರೊ. ಎಚ್.ಎಂ. ಚಂದ್ರಶೇಖರ ಹೇಳಿದರು.

ಇಲ್ಲಿನ ಮಹಿಳಾ ವಿವಿ ಆವರಣದಲ್ಲಿ ಕಾಲೇಜು ದೈಹಿಕ ಶಿಕ್ಷಣ ನಿರ್ದೇಶಕರುಗಳ ಸಂಘದ ಉದ್ಘಾಟನಾ ಸಮಾರಂಭದಲ್ಲಿ ಅವರು ಮಾತನಾಡಿದರು.

ಸಂಘವು ದೈಹಿಕ ಶಿಕ್ಷಣದ ಕ್ಷೇತ್ರದಲ್ಲಿ ವಿದ್ಯಾರ್ಥಿಗಳನ್ನು ತರಬೇತಿ ನೀಡಿ, ಅವರ ಜೀವನನ್ನು ಉನ್ನತ ಮಟ್ಟಕ್ಕೆ ಕರೆದುಕೊಂಡು ಹೋಗಬೇಕು. ಕಾಲೇಜುಗಳಲ್ಲಿ ದೈಹಿಕ ಶಿಕ್ಷಣ ನಿರ್ದೇಶಕರುಗಳ ಪಾತ್ರ ಮಹತ್ವದಾಗಿದೆ ಎಂದರು.

ರಾಜ್ಯ ಅಕ್ಕಮಹಾದೇವಿ ಮಹಿಳಾ ವಿವಿಯ ಶಿಕ್ಷಣ ನಿಕಾಯದ ಡೀನ್, ಸಿಂಡಿಕೇಟ್ ಸದಸ್ಯ ಪ್ರೊ. ರಾಜಕುಮಾರ ಮಾಲಿಪಾಟೀಲ, ಮಾನವ ಸಂಘ ಜೀವಿ, ಸಮಾಜ ಜೀವಿಯಾಗಿರುವುದ–ರಿಂದ ಕ್ರೀಡೆಗಳು ವಿದ್ಯಾರ್ಥಿಗಳನ್ನು ಸಮಾಜಮುಖಿಯಾಗಿ ಬದುಕಲು ಕಲಿಸುತ್ತವೆ. ಕ್ರೀಡೆಗಳು ರಾಷ್ಟ್ರೀಯ ಭಾವೈಕ್ಯತೆಯನ್ನು ಮೂಡಿಸುವಲ್ಲಿ ಪ್ರಮುಖ ಪಾತ್ರ ವಹಿಸುತ್ತವೆ. ಕ್ರೀಡೆಯಲ್ಲಿ ಸೋಲು, ಗೆಲವು ಸಹಜವಾದರೂ ನಿರಂತರ ಸಾಧನೆಯಿಂದ ಐತಿಹಾಸಿಕ ಗುರಿ ಮುಟ್ಟಲು ಸಾಧ್ಯವಾಗುತ್ತದೆ ಎಂದರು.

ಕಾರ್ಯಕ್ರಮದ ಅಧ್ಯಕ್ಷತೆ ವಹಿಸಿದ ಶಿವಪ್ರಸಾದ ಎಸ್. ಎಲಿ ಮಾತನಾಡಿ, ದೈಹಿಕ ಶಿಕ್ಷಣ ನಿರ್ದೇಶಕರುಗಳ ಸಂಘ ನಿರಂತರವಾಗಿ ವಿದ್ಯಾರ್ಥಿನಿಯರ ಸರ್ವಾಂಗೀಣ ಅಭಿವೃದ್ಧಿಗೆ ಶ್ರಮಿಸಬೇಕು. ಕಾಲೇಜು ಪ್ರತಿಭೆಗಳನ್ನು ಗುರುತಿಸಿ, ಕೀರ್ತಿವಂತ ಮೂರ್ತಿಗಳನ್ನಾಗಿ ಮಾಡುವ ಜವಾಬ್ದಾರಿ ದೈಹಿಕ ಶಿಕ್ಷಣ ಶಿಕ್ಷಕರ ಮೇಲಿದೆ ಎಂದರು.

ಇದೇ ಸಂದರ್ಭದಲ್ಲಿ ಕ್ರೀಡೆಯಲ್ಲಿ ಸಾಧನೆ ಮಾಡಿದ ಸಾಧಕರಿಗೆ ಸನ್ಮಾನ ಮಾಡಲಾಯಿತು.

ಡಾ. ರಾಜಶೇಖರ ಬೆನಕನಹಳ್ಳಿ, ಡಾ. ಹನುಮಂತಯ್ಯ ಪೂಜಾರ, ಪ್ರೊ. ವಿಷ್ಣು ಶಿಂದೆ, ಅಶ್ವಿನಿ ಕೆ.ಎನ್., ಮಹಾಂತೇಶ ಲಾಯದಗುಂದಿ, ಶಂಕುತಲಾ ಬಿರಾದಾರ, ಮಹೇಶ್ವರಿ ಉದಗಟ್ಟಿ, ಮಲ್ಲವ್ವ ಬಾಜಪ್ಪನವರ, ಸುನೀಲ ನಡಕಟ್ಟಿ, ಮಂಚಪ್ಪ ಸಣ್ಣಬಸಪ್ಪನವರ, ಡಾ. ಮಲ್ಲಸಿದ್ದಪ್ಪ ಇದ್ದರು.

ವಿಜಯಕುಮಾರ ಬಿಕ್ಕಣ್ಣವರ ಸ್ವಾಗತಿಸಿದರು. ಡಾ. ಸವಿತಾ ಅಣ್ಣೆಪ್ಪನವರ ನಿರೂಪಿಸಿದರು. ಮಲ್ಲಿಕಾರ್ಜುನ ಡೋಣ್ಣೂರ ವಂದಿಸಿದರು.

# ಜ್ಞಾನವಾಪಿ ನಾವೆಂದೂ ಬಿಟ್ಟು ಕೊಡುವುದಿಲ್ಲ :ಎಸ್‌ಡಿಪಿಐ



ಉದಯರಶ್ಮಿ ನ್ಯೂಸ್

ವಿಜಯಪುರ: ವಾರಣಾಸಿಯ ಜ್ಞಾನವಾಪಿಯನ್ನು ನಾವೆಂದೂ ಮುಸ್ಲಿಂರಿಂದ ಕಸಿಯಲು ಬಿಟ್ಟು ಕೊಡುವುದಿಲ್ಲ ಎಂದು ಸೋಶಿಯಲ್ ಡೆಮಾಕ್ರೆಟಿಕ್ ಪಾರ್ಟಿ ಆಫ್ ಇಂಡಿಂ–ಯಾ (ಎಸ್‌ಡಿಪಿಐ) ಪಕ್ಷ ತಿಳಿಸಿದೆ.

ಶುಕ್ರವಾರ ಈ ಕುರಿತು ಪ್ರಕಟಣೆಯಲ್ಲಿ ತಿಳಿಸಿದ ಪಕ್ಷವು, ಸಂವಿಧಾನದ ಮೂಲಕ ಬರುವ ಹಕ್ಕುಗಳನ್ನು ಯಾರು ಕಸಿಯಲಾರರು ಎಂಬ ನಂಬಿಕೆ ಅಚಲವಾಗಿರುತ್ತದೆ. ಆ ಸಂವಿಧಾನದ ಅಡಿಯಲ್ಲಿ ಕಾರ್ಯನಿರ್ವಹಿಸುವ ಸಂಸತ್ತು ಕೈಗೊಳ್ಳುವ ಕಾಯ್ದೆ, ಕಾನೂನುಗಳು ಸಂವಿಧಾನದ ಪರಿಧಿಯಲ್ಲಿರುತ್ತವೆ. ಅಂತಹದ್ದೇ ಒಂದು ಕಾಯ್ದೆ 1991ರ ಪೂಜಾ ಸ್ಥಳಗಳ ಕಾಯ್ದೆ. ಹಾಗಿದ್ದೂ ಜ್ಞಾನವಾಪಿ ಮಸೀದಿಯನ್ನು ಷಡ್ಯಂತ್ರದ ಮೂಲಕ ಮುಸ್ಲಿಮರಿಂದ ಕಸಿಯುವ ಪ್ರಯತ್ನ ನಡೆಯುತ್ತಿದೆ.

ಬಿಜೆಪಿ ಮತ್ತು ಸಂಘಪ–ರಿವಾರ ಅಲ್ಪಸಂಖ್ಯಾತರನ್ನು ಎರಡನೇ ದರ್ಜೆಯ ಪ್ರಜೆಗಳಾಗಿ ಮಾರ್ಪಡಿಸಬೇಕು ಎಂದು ಷಡ್ಯಂತ್ರ ರೂಪಿಸುತ್ತಿದೆ. ಅದರ ಭಾಗವಾಗಿ ಮುಸ್ಲಿಮರ ಸಾಂಸ್ಕೃತಿಕ ಗುರುತುಗಳನ್ನು ಅಳಿಸಿ ಹಾಕುವ ಅಪಾಯಕಾರಿ ಯೋಜನೆಗಳನ್ನು ರೂಪಿಸಿಕೊಂಡು ಅದನ್ನು ಹಂತ ಹಂತವಾಗಿ ಕಾರ್ಯರೂಪಕ್ಕೆ ತರುತ್ತಿದೆ. ಹೆಸರು ಬದಲಾವಣೆ ಎಂಬುದು ಅವರ ಒಂದು ಅಸ್ತ್ರವಾದರೆ, ಇನ್ನೊಂದು ಪ್ರಬಲ ಅಸ್ತ್ರ ಮುಸ್ಲಿಮರ ನಂಬಿಕೆಗಳ ಮೇಲೆ ಪ್ರಹಾರ ನಡೆಸುವುದು. ಮುಸ್ಲಿಮರ ಮಸೀದಿಗಳನ್ನು ಅವ–ರಿಂದ ಕಿತ್ತುಕೊಳ್ಳುವ ಮೂಲಕ ಅವರ ನಂಬಿಕೆಗಳ ಮೇಲೆ ಪ್ರಹಾರ ನಡೆಸಬೇಕು ಎಂಬುದು ಫ್ಯಾಸಿಸ್ಟ್ ಬಿಜೆಪಿ ಮತ್ತು ಸಂಘ ಪರಿವಾರದ ತಂತ್ರ. ಅದರ ಭಾಗವಾಗಿ ಈಗಾಗಲೇ ಬಾಬರಿ ಮಸೀದಿಯನ್ನು ದೇಶದ ಮುಸ್ಲಿಮರ ಪಾಲಿಗೆ ಇಲ್ಲವಾಗಿಸಿದ್ದಾರೆ. ಈಗ ಜ್ಞಾನವಾಪಿ ಮಸೀದಿಯನ್ನು ಕೂಡ ಅದೇ ಸಾಲಿಗೆ ಸೇ–ರಿಸಲು ಹವಣಿಸುತ್ತಿದ್ದಾರೆ ಎಂದು ಎಸ್.ಡಿ.ಪಿ.ಐ ತನ್ನ ಪ್ರಕಟಣೆಯಲ್ಲಿ ಆಕ್ರೋಶವನ್ನು ಹೊರ ಹಾಕಿದೆ.

ಶುಕ್ರವಾರ ನಗರದ ಡಾ ಅಂಬೇಡ್ಕರ್ ವೃತ್ತ ಹತ್ತಿರ ಎಸ್ ಡಿ ಪಿ ಐ ಪಕ್ಷದ ನಾಯಕರಿಂದ ಬೃಹತ್ ಪ್ರತಿಭಟನೆ ಹಮ್ಮಿಕೊಳ್ಳಲಾಗಿತ್ತು ಈ ಸಂದರ್ಭದಲ್ಲಿ ಜಿಲ್ಲಾಧ್ಯಕ್ಷ ಅಥ–ಾವುಲ್ಲಾ ದ್ರಾಕ್ಷೀ ಮಾತನಾಡಿದರು. ಹಾಗೂ ಜಿಲ್ಲಾ ಸಮಿತಿ ಮುಖಂಡರು ಹಾಗೂ ನಗರ ಸಮಿತಿಯ ಸದಸ್ಯರು ಹಾಗೂ ಸಾರ್ವಜನಿಕರು ಇತರರು ಉಪಸ್ಥಿತರಿದ್ದರು.

# ಸಂವಿಧಾನ ಮೌಲ್ಯಗಳನ್ನರಿತು ಜೀವನ ಸಾಗಿಸಿ :ಪ್ರೀತಿ



ಉದಯರಶ್ಮಿ ನ್ಯೂಸ್

ಬಸವನಬಾಗೇವಾಡಿ: ಸಂವಿಧಾನದ ಮೌಲ್ಯಗಳನ್ನು ಪ್ರತಿಯೊಬ್ಬರು ಅರಿತುಕೊಂಡು ಜೀವನ ಸಾಗಿಸಬೇಕೆಂದು ಮುತ್ತಗಿ ಸರ್ಕಾರಿ ಪದವಿ ಪೂರ್ವ ಕಾಲೇಜಿನ ಉಪನ್ಯಾಸಕಿ ಪ್ರೀತಿ ಎಸ್. ಹೇಳಿದರು.

ತಾಲೂಕಿನ ಮುತ್ತಗಿ ಗ್ರಾಮದ ಮಾರುತೇಶ್ವರ ಕಲ್ಯಾಣ ಮಂಟಪದಲ್ಲಿ ಸಂವಿಧಾನ ಜಾಗೃತಿ ಜಾಥಾಯಂಗವಾಗಿ ಶನಿವಾರ ಹಮ್ಮಿಕೊಂಡಿದ್ದ ಕಾರ್ಯಕ್ರಮದಲ್ಲಿ ಮಾತನಾಡಿದ ಅವರು, ಸಂವಿಧಾನದ ರೂಪುರೇಷೆ, ಮೌಲ್ಯ, ಸಿದ್ಧಾಂತ ಮತ್ತು ಉದ್ದೇಶಗಳ ಸಾರಾಂಶವೇ ಸಂವಿಧಾನದ ಪ್ರಸ್ತಾವನೆಯಾಗಿದೆ. ಜನತೆಯ ಧ್ಯೇಯಗಳನ್ನು ನಿರ್ಧರಿಸಿ ಘೋಷಿಸಿಕೊಂಡ ಆದರ್ಶಗಳ ತತ್ವವಾಗಿದೆ. ವ್ಯಕ್ತಿತ್ವ ವಿಕಸನವಾಗಲು ಹಕ್ಕುಗಳ ಅಗತ್ಯವಿದೆ. ನಮ್ಮ ಸಂವಿಧಾನ ನಮ್ಮ ಹೆಮ್ಮೆ. ಎಲ್ಲರೂ ಸಂವಿಧಾನಕ್ಕೆ ಬದ್ಧರಾಗಿ ಜೀವನ ಸಾಗಿಸಬೇಕೆಂದರು.

ಸಾನಿಧ್ಯ ವಹಿಸಿದ್ದ ವೀರರುದ್ರಮುನಿ ಶಿವಾಚಾರ್ಯ ಸ್ವಾಮೀಜಿ, ಡಿಎ□□□ಸ್ ಮುಖಂಡರಾದ ಅಶೋಕ ಚಲವಾದಿ, ಅಶೋಕ ನಡುವಿನಮನಿ, ಶ್ರೀಶೈಲ ಜಾಲವಾದಿ ಮಾತನಾಡಿದರು.

ಕಾರ್ಯಕ್ರಮದಲ್ಲಿ ಗ್ರೇಡ್–2 ತಹಸೀಲ್ದಾರ ಜಿ.ಎಸ್.ನಾಯಕ, ಸಮಾಜ ಕಲ್ಯಾಣ ಇಲಾಖೆಯ ಅಧಿಕಾರಿ ಭವಾನಿ ಪಾಟೀಲ, ಬಿಇಓ ವಸಂತ ರಾಠೋಡ, ಕೃಷಿ ಇಲಾಖೆಯ ಸಹಾಯಕ ನಿರ್ದೇಶಕ, ಜಾಥಾದ ನೋಡಲ್ ಅಧಿಕಾರಿ ಎಂ.ಎಚ್.ಯರಝರಿ, ಪಿಡಿಓ ಬಿ.ಎಸ್.ಬಡಿಗೇರ, ಗ್ರಾಪಂ ಅಧ್ಯಕ್ಷೆ ನೀಲಾ ಪಾಟೀಲ, ಉಪಾಧ್ಯಕ್ಷೆ ಕವಿತಾ ಬಡಿಗೇರ, ಮುಖಂಡರಾದ ರಮೇಶ ಸೂಳಿಬಾವಿ, ಪ್ರೇಮಕುಮಾರ ಮ್ಯಾಗೇರಿ, ಪರಶುರಾಮ ದಿಂಡವಾರ, ಮಹಾಂತೇಶ ಸಾಸಾಬಾಳ, ಸುರೇಶ ಸಿಂಗೆ ಇತರರು ಇದ್ದರು. ಎಂ.ಬಿ.ತೋಟದ ಸ್ವಾಗತಿಸಿದರು. ಎಸ್.ಎಸ್.ಚಿಮ್ಮಲಗಿ ನಿರೂಪಿಸಿದರು. ಎ.ಎಚ್.ಮುಲ್ಲಾ ವಂದಿಸಿದರು.

ಮೆರವಣಿಗೆಃ ಕಾರ್ಯಕ್ರಮಕ್ಕೂ ಮುನ್ನ ಮುತ್ತಗಿ ಕ್ರಾಸ್ನಲ್ಲಿ ಸಂವಿಧಾನ ಜಾಗೃತಿ ಜಾಥಾದ ಸ್ತಬ್ಧಚಿತ್ರವನ್ನು ಪೂಜೆ ಸಲ್ಲಿಸುವ ಮೂಲಕ ತಾಲೂಕಾಡಳಿತ ಪರವಾಗಿ ವಿವಿಧ ವಾದ್ಯಮೇಳದೊಂದಿಗೆ ಭವ್ಯವಾಗಿ ಸ್ವಾಗತಿಸಿಕೊಳ್ಳಲಾಯಿತು. ಮುತ್ತಗಿ ಕ್ರಾಸ್ದಿಂದ ಆರಂಭವಾದ ಮೆರವಣಿಗೆ ಗ್ರಾಮದ ಪ್ರಮುಖ ಬೀದಿಗಳಲ್ಲಿ ಸ್ತಬ್ಧ ಚಿತ್ರ ಸಾಗಿ ಸಂವಿಧಾನ ಜಾಗೃತಿ ಮೂಡಿಸಿತು. ಮೆರವಣಿಗೆ ಮಾರ್ಗದಲ್ಲಿ ವಿವಿಧ ರಂಗವಲ್ಲಿ ಚಿತ್ತಾರ ಬಿಡಿಸುವ ಮೂಲಕ ಜಾಥಾಕ್ಕೆ ಗ್ರಾಮಸ್ಥರು ಸ್ವಾಗತಿಸಿಕೊಂಡರು. ಮೆರವಣಿಗೆಯಲ್ಲಿ ಗ್ರೇಡ್–2 ತಹಸೀಲ್ದಾರ, ಬಿಇಓ, ಸಮಾಜ ಕಲ್ಯಾಣ ಇಲಾಖೆಯ ಅಧಿಕಾರಿ ಸೇರಿದಂತೆ ವಿವಿಧ ಇಲಾಖೆಯ ಅಧಿಕಾರಿಗಳು, ವಿವಿಧ ಮುಖಂಡರು, ಮುತ್ತಗಿ ಗ್ರಾಮ ಪಂಚಾಯಿತಿ ವ್ಯಾಪ್ತಿಯ ಎಲ್ಲ ಶಾಲೆಯ ಸಿಬ್ಬಂದಿ, ಮಕ್ಕಳು, ಡಿಎ□□□ಸ್ ಮುಖಂಡರು ಭಾಗವಹಿಸಿದ್ದರು. ಮೆರವಣಿಗೆಯಲ್ಲಿ ಭಾರತಮಾತೆ, ಗಾಂಧೀಜಿ, ಡಾ.ಅಂಬೇಡ್ಕರ ಸೇರಿದಂತೆ ವಿವಿಧ ಮಹನೀಯರ ವೇಷಭೂಷಣ ಧರಿಸಿದ ವಿದ್ಯಾರ್ಥಿಗಳು ಗಮನ ಸೆಳೆದರು. ವಿವಿಧ ಕಲಾತಂಡಗಳು ಮೆರವಣಿಗೆಗೆ ಮೆರಗು ತಂದವು.

# ಚುನಾವಣೆ ಐಡಿಗಾಗಿ ಎರಡು ಫೋಟೋ ಕಡ್ಡಾಯ

ಉದಯರಶ್ಮಿ ನ್ಯೂಸ್

ಇಂಡಿ: ಇಂದು ಬಾನುವಾರ ನಡೆಯುವ ಶ್ರೀ ಭೀಮಾಶಂಕರ ಸಕ್ಕರೆ ಕಾರ್ಖಾನೆ ಚುನಾವಣೆಯಲ್ಲಿ ಗುರುತಿನ ಪತ್ರ ಇಲ್ಲದವರು ಎರಡು ಪೋಟೋ ತರಬೇಕು ಎಂದು ಚುನಾವಣೆ ಅಧಿಕಾರಿ ಮತ್ತು ಕಂದಾಯ ಉಪವಿಭಾಗಾಧಿಕಾರಿ ಅಬೀದ್ ಗದ್ಯಾಳ ತಿಳಿಸಿದ್ದಾರೆ.

ಗುರುತಿನ ಪತ್ರ ಇಲ್ಲದವರಿಗೆ ಮತ ನೀಡಲು ಅವಕಾಶವಿಲ್ಲ. ಹೀಗಾಗಿ ಎರಡು ಫೋಟೋ ತಂದರೆ ಮೊದಲು ಗುರುತಿನ ಪತ್ರ ಪಡೆದು ನಂತರ ಮತದಾನಕ್ಕೆ ಅವಕಾಶ ಕೊಡಲಾಗುವುದೆಂದು ಗದ್ಯಾಳ ತಿಳಿಸಿದ್ದಾರೆ.

ಅದಲ್ಲದೆ ಮತದಾನಕ್ಕೆ ಆದ–ಾರ ಕಾರ್ಡ ಅಥವಾ ಯಾವದೇ ಗುರುತಿನ ಚೀಟಿ ತಂದು ಮತ ಸಲ್ಲಿಸಬಹುದಾಗಿದೆ ಎಂದು ಗದ್ಯಾಳ ತಿಳಿಸಿದ್ದಾರೆ.

ಅದಲ್ಲದೆ ಚುನಾವಣೆ ನಡೆಯುವ ಮರಗೂರ ಸಕ್ಕರೆ ಕಾರ್ಖಾನೆಯ ಸಿದ್ದೇಶ್ವರ ಗೋದಾಮಿನ ಸುತ್ತಲೂ 500 ಮೀ ವ್ಯಾಪ್ತಿಯಲ್ಲಿ 144 ಅಡಿ ನಿಷೇದಾಜ್ಞೆ ಇದೆ. ಚುನಾವಣೆ ಗೋದಾಮಿನಲ್ಲಿ ಬೆಳಗ್ಗೆ 9 ರಿಂದ 4 ಗಂಟೆಯ ವರೆಗೆ ನಡೆಯಲಿದ್ದು ಸಂಜೆಯೇ ಫಲಿತಾಂಶ ನಿರೀಕ್ಷಿಸಲಾಗಿದೆ ಎಂದು ಗದ್ಯಾಳ ತಿಳಿಸಿದ್ದಾರೆ.

# ಸತತ ಅಧ್ಯಯನದಿಂದ ಗುರಿ ತಲುಪಲು ಸಾಧ್ಯ :ಆದಿಗೊಂಡ



ಉದಯರಶ್ಮಿ ನ್ಯೂಸ್

ಬಸವನಬಾಗೇವಾಡಿ: ವಿದ್ಯಾರ್ಥಿಗಳಲ್ಲಿನ ಪ್ರತಿಭೆ ಗುರುತಿಸಿ ಸೂಕ್ತ ಮಾರ್ಗದರ್ಶನ ಮಾಡಿದರೆ ಅವರು ಸಾಧಕರಾಗುತ್ತಾರೆ. ವಿದ್ಯಾರ್ಥಿಗಳು ನಿರಂತರ ಅಧ್ಯಯನದಿಂದ ಇಟ್ಟುಕೊಂಡಿರುವ ಗುರಿ ತಲುಪಬೇಕು ಎಂದು ನಿವೃತ್ತ ಶಿಕ್ಷಕ ಮಹಾಂತೇಶ ಆದಿಗೊಂಡ ಹೇಳಿದರು.

ಪಟ್ಟಣದ ಬಸವೇಶ್ವರ ಸರ್ಕಾರಿ ಪದವಿ ಪೂರ್ವ ಕಾಲೇಜಿನಲ್ಲಿ ಶನಿವಾರ ಹಮ್ಮಿಕೊಂಡಿದ್ದ ವಾರ್ಷಿಕೋತ್ಸವ ಹಾಗೂ ದ್ವಿತೀಯ ಪಿಯುಸಿ ವಿದ್ಯಾರ್ಥಿಗಳ ಬೀಳ್ಕೊಡುಗೆ ಸಮಾರಂಭದಲ್ಲಿ ಮಾತನಾಡಿದ ಅವರು, ವಿದ್ಯಾರ್ಥಿಗಳು ಪಠ್ಯದೊಂದಿಗೆ ಪಠ್ಯೇತರ ಚಟುವಟಿಕೆಗಳಲ್ಲಿ ಉತ್ಸಾಹದಿಂದ ಭಾಗವಹಿಸಬೇಕು. ಪಿಯುಸಿ ಹಂತ ಸಾಹಸದ ಹಂತವಾಗಿದೆ. ಪರೀಕ್ಷೆಗೆ ಭಯಪಡದೇ ಸಂತೋಷದಿಂದ ಬರೆಯುವಂತಾಗಬೇಕು. ಗುರಿ ಇಲ್ಲದಿದ್ದರೆ ಪ್ರಯತ್ನ ವ್ಯರ್ಥ ಎಂಬುದನ್ನು ಅರಿತುಕೊಳ್ಳಬೇಕು. ಜೀವನದಲ್ಲಿ ಪರಿವರ್ತನೆಯಾಗುವಂತಹ ಶಿಕ್ಷಣ ಪಡೆದುಕೊಳ್ಳಬೇಕು. ಮಾನವೀಯ ಮೌಲ್ಯ ಅಳವಡಿಸಿಕೊಳ್ಳಬೇಕು. ಪ್ರಾಮಾಣಿಕತೆ ಗೆಲುವಿಗೆ ದಾ–ರಿಯಾಗಲಿದೆ ಎಂದು ಹೇಳಿದರು.

ಅಧ್ಯಕ್ಷತೆ ವಹಿಸಿದ್ದ ಪ್ರಾಚಾರ್ಯ ಎಸ್.ಡಿ.ಪಾಟೀಲ ಮಾತನಾಡಿ, ವಿದ್ಯಾರ್ಥಿಗಳು ಭವಿಷ್ಯತ್ತಿನಲ್ಲಿ ಸುಂದರ ಬದುಕು ಸಾಗಿಸಬೇಕೆಂದರೆ ಸ್ಪರ್ಧಾತ್ಮಕ ಯುಗಕ್ಕೆ ತಕ್ಕಂತೆ ಅಧ್ಯಯನದಲ್ಲಿ ತೊಡಗಿ ಪರೀಕ್ಷೆಯಲ್ಲಿ ಉತ್ತಮ ಅಂಕ ಪಡೆಯಬೇಕು. ಗುರು, ಹಿರಿಯರನ್ನು ಗೌರವಿಸಬೇಕು. ಅಧ್ಯಯನದ ಸಮಯದಲ್ಲಿ ತಮಗೆ ಕ್ಲಿಷ್ಟವೆನಿಸಿದ ವಿಷಯಗಳಿಗೆ ಉಪನ್ಯಾಸಕರಿಂದ ಪರಿಹಾರ ಕಂಡುಕೊಳ್ಳಬೇಕು ಎಂದು ಹೇಳಿದರು.

ಕಾಲೇಜು ಅಭಿವೃದ್ಧಿ ಸಮಿತಿ ಉಪಾಧ್ಯಕ್ಷ ಶೇಖರ ಗೊಳಸಂಗಿ ಕಾರ್ಯಕ್ರಮ ಉದ್ಘಾಟಿಸಿದರು. ಉಪನ್ಯಾಸಕರಾದ ಜಿ.ಎಸ್. ಡೊಮನಾಳ, ಎಸ್.ವಿ.ಅಗಸರ, ವಿದ್ಯಾರ್ಥಿಗಳಾದ ಭೀಮರಾವ ದಿವಟಗಿ, ಸವಿತಾ ಪೂಜಾರಿ, ಗಂಗುಬಾಯಿ ಜಾಧವ, ಶಿವಲಿಂಗ ಗುಂದಗಿ, ನಿಂಗರಾಯ ಗುಗದಡ್ಡಿ ಮಾತನಾಡಿದರು.

ಗ್ರಂಥಪಾಲಕಿ ಮಹಾನಂದಾ ನಾಯಕ ವರದಿ ವಾಚನ ಮಾಡಿದರು. ಪ್ರಕಾಶ ಮಸಬಿನಾಳ ಸ್ವಾಗತಿಸಿದರು. ಚೇತನ ಬಾಗೇವಾಡಿ, ರಾಜಕುಮಾರ ಮುರಗೋಡ ನಿರೂಪಿಸಿದರು. ಮಲ್ಲಿಕಾರ್ಜುನ ಹೂಗಾರ ವಂದಿಸಿದರು.

ಕಾರ್ಯಕ್ರಮದಲ್ಲಿ ವಿವಿಧ ಸ್ಪರ್ಧೆಯಲ್ಲಿ ವಿಜೇತ ವಿದ್ಯಾರ್ಥಿಗಳಿಗೆ ಪರೀಕ್ಷೆಯಲ್ಲಿ ಹೆಚ್ಚು ಅಂಕ ಪಡೆದ ವಿದ್ಯಾರ್ಥಿಗಳಿಗೆ ಬಹುಮಾನ ವಿತ–ರಿಸಲಾಯಿತು.

# ಜಾತಿಗೆ ಪ್ರಾಮುಖ್ಯತೆ ನೀಡದೆ ವೃತ್ತಿಗೆ ಮಹತ್ವ ನೀಡಿ



**ಉದಯರಶ್ಮಿ ನ್ಯೂಸ್**

ಸಿಂದಗಿ: ಬಸವಣ್ಣನವರು ಸಣ್ಣ ಸಮಾಜವನ್ನು ಮೇಲ್ಮಟ್ಟಕ್ಕೆ ಕೊಂಡೊಯ್ದರು. ಆದರೆ ಕಾಯಕ ಶರಣರ ಜಯಂತಿಯ ದಿನ ಅಧಿಕಾರಿಗಳು ಗೈರು ಹಾಜರಾಗುವ ಮೂಲಕ ಅಗೌರವ ತೋರಿಸಿದ್ದು ಖಂಡನೀಯ ಎಂದು ಪುರಸಭೆ ಸದಸ್ಯ ರಾಜಣ್ಣ ನಾರಾಯಣಕರ ಹೇಳಿದರು.

ಪಟ್ಟಣದ ತಾಲೂಕು ಆಡಳಿತ ಸೌಧದಲ್ಲಿ ಹಮ್ಮಿಕೊಂಡ ಕಾಯಕ ಶರಣರಾದ ಮಾದರ ಚೆನ್ನಯ್ಯ, ಡೋಹರ್ ಕಕ್ಕಯ್ಯ, ಮಾದರ ಧೂಳಯ್ಯ, ಉರಿಲಿಂಗ ಪೆದ್ದಿ, ಸಮಗಾರ ಹರಳಯ್ಯ ಶರಣರ ಜಯಂತಿ ಕಾರ್ಯಕ್ರಮದಲ್ಲಿ ಮಾತನಾಡಿದ ಅವರು, ಸಣ್ಣ ಸಮಾಜವೆಂದು ತಿಳಿದು ಅಧಿಕಾರಿಗಳು ಗೈರಾಗಿದ್ದು ಬೇಸರವಾಗಿದೆ. ಇನ್ನು ಮುಖ್ಯಾಧಿಕಾರಿಗಳು ಪಟ್ಟಣದ ವೃತ್ತಗಳನ್ನು ಸ್ವಚ್ಛಗೊಳಿಸಬೇಕು. ತಹಶೀಲ್ದಾರ್‌ರು ಆದೇಶ ಮಾಡಬೇಕು. ತಾಲೂಕು ಆಡಳಿತ ಜಯಂತಿಗಳನ್ನು ಕಾಟಾಚಾರಕ್ಕೆ ಆಚರಣೆ ಮಾಡದೇ ಮುಂದಿನ ಯುವ ಜನಾಂಗಕ್ಕೆ ಮಾದರಿಯಾಗುವಂತೆ ಆಚರಣೆಯಾಗಲಿ ಎಂದರು.

ಈ ವೇಳೆ ಸಾಯಬಣ್ಣ ದೇವರಮನಿ ಮತ್ತು ಸಾಯಬಣ್ಣ ಪುರದಾಳ ಮಾತನಾಡಿ, ಬಸವಣ್ಣನವರ ಹಲವು ವಚನಗಳಲ್ಲಿ ಜಾತಿ ಮತ್ತು ವೃತ್ತಿಗಳ ಕುರಿತಾಗಿ ಹೇಳಿದ್ದಾರೆ. ಜಾತಿಗೆ ಪ್ರಾಮುಖ್ಯತೆ ನೀಡದೆ ಅವರ ವೃತ್ತಿಗೆ ಮಹತ್ವ ನೀಡಬೇಕು ಎಂದು ಬಸವಣ್ಣನವರು ತಮ್ಮ ವಚನಗಳಲ್ಲಿ ಹೇಳಿದ್ದಾರೆ. ಆದರೆ ಶರಣರು ಕಾಯಕದ ಜೊತೆಗೆ ದಿನನಿತ್ಯ ವಚನಗಳನ್ನು ತಿದ್ದಿ ಅಸಮಾನತೆ ಮತ್ತು ಅಸ್ಪೃಶ್ಯತೆ ಹೊಗಲಾಡಿಸುವ ನಿಟ್ಟಿನಲ್ಲಿ ಸಾಕಷ್ಟು ಪ್ರಯತ್ನಗಳನ್ನು ಮಾಡಿದ್ದಾರೆ. ಶರಣರನ್ನು ಜಾತಿಯಿಂದ ಗುರುತಿಸಬೇಡಿ ಅವರ ವೃತ್ತಿಯಿಂದ ಗುರುತಿಸಬೇಕು. ತಾಲೂಕು ಆಡಳಿತಕ್ಕೆ ಸಹಕಾರ ನೀಡಬೇಕಾದ ಅಧಿಕಾರಿಗಳು ಬೇಜವಾಬ್ದಾರಿತನದಿಂದ ನಡೆದುಕೊಳ್ಳುತ್ತಿದ್ದಾರೆ. ಅವರ ವಿರುದ್ಧ ಮೇಲಾಧಿಕಾರಿಗಳು ಸೂಕ್ತ ಕ್ರಮ ಕೈಗೊಳ್ಳಬೇಕು ಎಂದು ಆಗ್ರಹಿಸಿದರು.

ಈ ವೇಳೆ ಗ್ರೇಡ್ 2 ತಹಶೀಲ್ದಾರ್ ಇಂದ್ರಾಬಾಯಿ ಬಳಗಾನೂರ, ಜಿ. ಎಸ್.ರೋಡಗಿ, ಕಂದಾಯ ನಿರೀಕ್ಷಕ ಆಯ್.ಎ.ಮಕಾಂದಾರ, ರವಿಕಿರಣ ಕಟಕೆ, ಸುನಂದಾ ಯಂಪುರೆ, ಕಸಾಪ ಮಾಜಿ ತಾಲೂಕಾಧ್ಯಕ್ಷ ಚಂದ್ರಶೇಖರ ದೇವರೆಡ್ಡಿ, ರಾಜಕುಮಾರ ಭಾಸಗಿ, ರಾಜು ಗುಬ್ಬೇವಾಡ ಸೇರಿದಂತೆ ವಿವಿಧ ಸಮಾಜದ ಮುಖಂಡರು, ಅಧಿಕಾರಿಗಳು ಇದ್ದರು.

# ಜಾನಪದ ಸಂಸ್ಕೃತಿ ಅಳಿಯದಿರಲಿ :ಬಾಳನಗೌಡ

**ಉದಯರಶ್ಮಿ ನ್ಯೂಸ್**

ಕೊಲ್ಹಾರ: ಮಾನವರ ಆದರ್ಶ ಬದುಕಿಗೆ ಜಾನಪದ ಆಚಾರ ವಿಚಾರಗಳು ದಾರಿ ದೀಪವಾಗಿವೆ. ಸಾರ್ವತ್ರಿಕ ಮೌಲ್ಯಗಳನ್ನು ಪ್ರತಿಪಾದಿಸುತ್ತ, ಜನರ ಬದುಕಿನಲ್ಲಿ ಶಾಂತಿ ಹಾಗೂ ನೆಮ್ಮದಿ ತುಂಬಬಲ್ಲ ಸಾಮರ್ಥ್ಯ ಜಾನಪದ ಸಂಸ್ಕೃತಿಗಿದೆ. ಅದಕ್ಕಾಗಿ ಜಾನಪದ ಸಂಸ್ಕೃತಿ ಎಂದಿಗೂ ಹಾಳಾಗಬಾರದು ಎಂದು ಕನ್ನಡ ಜಾನಪದ ಪರಿಷತ್ ವಿಜಯಪುರ ಜಿಲ್ಲಾಧ್ಯಕ್ಷ ಬಾಳನಗೌಡ ಪಾಟೀಲ (ಪಡಗಾನೂರ) ಹೇಳಿದರು.

ಕೊಲ್ಹಾರ ತಾಲೂಕಿನ ಕವಲಗಿ ಗ್ರಾಮದ ಬೀರಲಿಂಗೇಶ್ವರ ದೇವಸ್ಥಾನದಲ್ಲಿ ಕನ್ನಡ ಜಾನಪದ ಪರಿಷತ್ ವಿಜಯಪುರ ಜಿಲ್ಲಾ ಘಟಕ ಮತ್ತು ಕೊಲ್ಹಾರ ತಾಲೂಕು ಘಟಕದ ಸಹಯೋಗದಲ್ಲಿ ಕೂಡಗಿ ಕ ಜಾ ಪ ವಲಯ ಘಟಕದ ಉದ್ಘಾಟನೆ ನೆರವೇರಿಸಿ ಮಾತನಾಡಿದ ಅವರು,

ಹಿರಿಹೊಳಿ ತಟದ ಈ ಭಾಗದಲ್ಲಿ ಜನಪದ ಕಲೆಗಳು ಪ್ರತಿ ಮನೆಯಲ್ಲಿಯೂ ಕಾಣುತ್ತೇವೆ. ಸಂಘ, ಸಂಸ್ಥೆ ಮತ್ತು ಸಮುದಾಯಗಳು ಜಾನಪದ ಕಲಾವಿದರಿಗೆ ಸಹಾಯ ಸಹಕಾರ ನೀಡಲು ಕರೆ ನೀಡಿದರು.



ನೂತನ ಪದಾಧಿಕಾರಿಗಳಿಗೆ ಪದಪತ್ರ ನೀಡಿ ಮಾತನಾಡಿದ ವಿಜಯಪುರ ಜಿಲ್ಲಾ ಚುಟುಕು ಸಾಹಿತ್ಯ ಪರಿಷತ್ ಅಧ್ಯಕ್ಷ ಜಗದೀಶ ಸಾಲಳ್ಳಿ, ವಿಜಯಪುರ ಜಿಲ್ಲೆಯಲ್ಲಿ ಅನೇಕ ಸಂಘಟನೆಗಳಲ್ಲಿ ಕನ್ನಡ ಜಾನಪದ ಪರಿಷತ್ ಮುಂಚೂಣಿಯಲ್ಲಿದೆ. ಜಾನಪದ ಕಲಾವಿದರ ಮತ್ತು ಸಾಹಿತಿಗಳ ಉಳಿವಿಗಾಗಿ ಜಿಲ್ಲಾಧ್ಯಕ್ಷ ಬಾಳನಗೌಡ ಪಾಟೀಲ ಮತ್ತು ಅವರ ಪದಾಧಿಕಾರಿಗಳು ಜನ ಮೆಚ್ಚುವ ಹಾಗೆ ಕೆಲಸ ಮಾಡುತ್ತಿದ್ದಾರೆ ಎಂದು ಹೇಳಿದರು.

ಕನ್ನಡ ಜಾನಪದ ಪರಿಷತ್ ಬಸವನಬಾಗೇವಾಡಿ ತಾಲೂಕಾಧ್ಯಕ್ಷ ದೇವೇಂದ್ರ ಗೋನಾಳ ಪ್ರಾಸ್ತಾವಿಕವಾಗಿ ಮಾತನಾಡಿದರು.

ಹಿರೇಮಠದ ಸ್ವಾಮೀಜಿ ಸಾನ್ನಿಧ್ಯ ವಹಿಸಿದ್ದರು. ಕನ್ನಡ ಜಾನಪದ ಪರಿಷತ್ ಕೊಲ್ಹಾರ ತಾಲೂಕಾಧ್ಯಕ್ಷ ಮಲ್ಲಪ್ಪ ಗಣಿ ಅಧ್ಯಕ್ಷತೆ ವಹಿಸಿದ್ದರು.

ಕ ಜಾ ಪ ನಿಡಗುಂದಿ ತಾಲೂಕಾಧ್ಯಕ್ಷ ವೈ ಎಸ್ ಗಂಗಶೆಟ್ಟಿ, ಕ ಜಾ ಪ ಜಿಲ್ಲಾ ಸಂಚಾಲಕ ಪ್ರೊ ಗುರುರಾಜ ಹಳ್ಳೂರ, ಜಿಲ್ಲಾ ಘಟಕದ ಸದಸ್ಯರಾದ ಸಿದ್ಧರಾಮ ಬಿರಾದಾರ, ಮೌಲಾಸಾಹೇಬ ಜಹಾಗೀರದಾರ ಮಾತನಾಡಿದರು.

ನೂತನ ವಲಯ ಘಟಕದ ಅಧ್ಯಕ್ಷ ದುಂಡಯ್ಯ ಮಠಪತಿಯವರನ್ನು ಜಿಲ್ಲಾ ಘಟಕದ ವತಿಯಿಂದ ಸನ್ಮಾನಿಸಲಾಯಿತು.

ಕಾರ್ಯಕ್ರಮದಲ್ಲಿ ಬಳೂತಿ, ಸುಳಕೋಡ, ಉಪ್ಪಲದಿನ್ನಿ ಹೆಜ್ಜೆಮೇಳ, ಕವಲಗಿ ಡೊಳ್ಳಿನಪದ, ತೆಲಗಿ ಹಲಗೆ ಮಜಲು ಸೇರಿದಂತೆ ಹತ್ತಾರು ಜನಪದ ಕಲಾ ತಂಡಗಳ ಪ್ರದರ್ಶನ ನಡೆಯಿತು.

ವಲಯ ಘಟಕದ ನೂತನ ಅಧ್ಯಕ್ಷ ದುಂಡಯ್ಯ ಮಠಪತಿ ಸ್ವಾಗತಿಸಿದರು. ಶಿಕ್ಷಕ ವಿಶ್ವನಾಥ ಪತ್ತಾರ ನಿರೂಪಿಸಿದರು. ಅನೀಲಕುಮಾರ ತಳವಾರ ವಂದಿಸಿದರು.

# ಮಲಘಾಣ: ಸಂವಿಧಾನ ಜಾಗೃತಿ ಜಾಥಾ ರಥಕ್ಕೆ ಅದ್ದೂರಿ ಸ್ವಾಗತ

**ಉದಯರಶ್ಮಿ ನ್ಯೂಸ್**

ಸಿಂದಗಿ: ತಾಲೂಕಿನ ಮಲಘಾಣ ಗ್ರಾಮದಲ್ಲಿ ಸಂವಿಧಾನ ಜಾಗೃತಿ ಜಾಥಾ ರಥಕ್ಕೆ ಗ್ರಾಮದ ಸಾರ್ವಜನಿಕರು ಅದ್ದೂರಿಯಾಗಿ ಸ್ವಾಗತಿಸಿಕೊಂಡರು.

ಈ ಸಂದರ್ಭದಲ್ಲಿ ದಸಂಸ ಜಿಲ್ಲಾ ಸಂಚಾಲಕ ಚಂದ್ರಕಾತ ಸಿಂಗೆ ಮಾತನಾಡಿ, ರಾಜ್ಯ ಸರಕಾರ ಡಾ. ಅಂಬೇಡ್ಕರರು ರಚಿಸಿದ ಸಂವಿಧಾನದ ಮೂಲ ಆಶಯಗಳನ್ನು ಸಾರ್ವಜನಿಕರಿಗೆ ಮನೆ ಮಾತಾಗಲಿ ಎಂದು ಜಾಗೃತಿ ಜಾಥಾ ಹಮ್ಮಿಕೊಂಡಿದ್ದು ಶ್ಲಾಘನೀಯ. ಯಾವುದೇ ಜಾತಿಯಲ್ಲಿ ತುಳಿತಕ್ಕೊಳಗಾದ ಜನರಿಗೆ ನ್ಯಾಯ ಕೊಡಿಸುವ ನಿಟ್ಟಿನಲ್ಲಿ, ಸಮ ಸಮಾಜ ನಿರ್ಮಾಣಕ್ಕೆ ಡಾ. ಬಾಬಾಸಾಹೇಬ ಅಂಬೇಡ್ಕರರು ಸಂವಿಧಾನದಲ್ಲಿ ಅಡಕುಗಳನ್ನು ರಚಿಸಿ ನ್ಯಾಯ ಕೊಡಿಸಿದ್ದಾರೆ ಎಂದು ಹೇಳಿದರು.

ಗ್ರಾಮದ ಮುಖಂಡ ಯಶವಂತ್ರಯಗೌಡರೂಗಿ ಮಾತನಾಡಿ, ಡಾ ಅಂಬೇಡ್ಕರರು ದೀನ ದಲಿತರಿಗೆ ಗುರಿಯಾಗಿಟ್ಟುಕೊಂಡು ಸಂವಿಧಾನ ಬರೆದಿಲ್ಲ, ಎಲ್ಲ ಸಮ ಸಮಾಜಗಳ ನಿರ್ಮಾಣಕ್ಕೆ ಸಂವಿಧಾನ ರಚನೆಯಾಗಿದೆ. ಅದು ಸರಿಯಾಗಿ



ಪರಿಚಯವಾಗದ ಕಾರಣ ಕೆಲವು ಪ್ರಮಾದಗಳು ಜರುಗುತ್ತಿದ್ದು ಅದನ್ನು ತಿಳಿಸಿಕೊಡಬೇಕು ಎಂದು ರಾಜ್ಯ ಸರಕಾರ ಸಂವಿಧಾನ ಜಾಗೃತಿ ಜಾಥಾ ಹಮ್ಮಿಕೊಂಡಿದ್ದು ಸ್ವಾಗತಾರ್ಹ. ಡಾ. ಅಂಬೇಡ್ಕರರವರ ಆಶಯಗಳ ಜನರಿಗೆ ಮುಟ್ಟಿಸುವ ಕಾರ್ಯದಲ್ಲಿ ನಾವು ನೀವೆಲ್ಲ ತೊಡಗೋಣ ಎಂದರು.

ಗ್ರಾಪಂ ಅಧ್ಯಕ್ಷೆ ಶ್ರೀಮತಿ ಮಂಜುಳಾ ಕಾಂತಪ್ಪ ನಡುವಿನಕೇರಿ, ಉಪಾಧ್ಯಕ್ಷೆ ಸಂಗಮ್ಮ ದುದ್ದಣಗಿ, ಗ್ರಾಪಂ ಅಭಿವೃದ್ಧಿ ಅಧಿಕಾರಿ ಬಸೀರ ಚಿಕ್ಕಲಗಿ, ಸಮಾಜ ಕಲ್ಯಾಣ ಇಲಾಖೆಯ ಶಿವಲಿಂಗ ಹಚಡದ, ಆರ್.ಎಸ್ ಬನ್ನೇಟ್ಟಿ, ಗ್ರಾಮದ ಮುಖಂಡ ಮಹಾದೇವಪ್ಪ ಬರಗಾಲ ಇದ್ದರು.

## ಪರ್ಯಾಯವಿಲ್ಲದ್ದು

**ಉದಯರಶ್ಮಿ ದಿನಪತ್ರಿಕೆ**

**ಕಾವ್ಯರಶ್ಮಿ**

– ಡಾ. ರಾಜಶೇಖರ ನಾಗೂರ

("ನಮ್ಮ ಕಥಾ ಅರಮನೆ" ಬರಹಗಾರರು)



ಸಾಬೀತು ಮಾಡಲಾಗಲಿಲ್ಲ
ಎಂದ ಮಾತ್ರಕ್ಕೆ ನನ್ನ ಪ್ರೀತಿಯ
ಅನುಮಾನಿಸಬೇಡ.

ನನ್ನ ಪ್ರತಿ ಪೂಜೆಯೊಳಗಿನ
ಪ್ರಾರ್ಥನೆಯ ಕೇಳಿ ನೋಡು.
ಹೃದಯದ ಪ್ರತಿ ಬಡಿತ ಅದರ
ಒಳ ಮಿಡಿತವ ಆಲಿಸಿ ನೋಡು.

ಪ್ರೀತಿಗೆ ಪರ್ಯಾಯವಿದ್ದಿದ್ದರೆ
ಪರಿ ಪರಿಯಾಗಿ ಪ್ರಾರ್ಥಿಸುವ
ಪರಿಸ್ಥಿತಿ ನನಗಿರುತ್ತಿರಲಿಲ್ಲ.

ಕೇವಲ ನಂಬಿಕೆಯ ಮೇಲೆ
ಒಪ್ಪಿ-ಅಪ್ಪುವ ಅಗೋಚರ
ಆಪ್ಯಾಯಮಾನದ ಅನುಭೂತಿ
ನನ್ನೊಲವು ಓ ಒಲವೇ !



# ಎಸ್ಡಿಎಂಸಿ ಅಧ್ಯಕ್ಷರಾಗಿ ಹಕೀಮ್, ಉಪಾಧ್ಯಕ್ಷರಾಗಿ ಪಾರ್ವತಿ ಆಯ್ಕೆ



**ಉದಯರಶ್ಮಿ ನ್ಯೂಸ್**

ಬ್ರಹ್ಮದೇವನಮಡು: ಸಿಂದಗಿ ತಾಲೂಕಿನ ಬನ್ನಿಹಟ್ಟಿ (ಪಿ.ಟಿ) ಗ್ರಾಮದ ಸರಕಾರಿ ಹಿರಿಯ ಪ್ರಾಥಮಿಕ ಶಾಲೆಯ ನೂತನ ಎಸ್ಡಿಎಂಸಿ ಅಧ್ಯಕ್ಷರಾಗಿ ಮಹ್ಮದ ರಫೀಕ ಹಕೀಮ ಹಾಗೂ ಉಪಾಧ್ಯಕ್ಷರಾಗಿ ಪಾರ್ವತಿ ಕರೆಪ್ಪ ಪೂಜಾರಿ ಹಾಗೂ ಸದಸ್ಯರಾಗಿ ಇಮಾಂಬಿ ಮುಲ್ಲಾ, ರುದ್ರಗೌಡ ಬಿರಾದಾರ, ಸಾಹೇಬಗೌಡ ಗುಂಡಕನಾಳ, ರಾಬಿಯಾ ಮುಲ್ಲಾ, ರಾಮರಾವ ಕುಲಕರ್ಣಿ,ನಬಿಲಾಲ ವಾಲಿಕಾರ, ವೀರಭದ್ರಪ್ಪ ಕುಂಬಾರ, ಮಾಲನಬಿ ಶೇಖ, ಅಶೋಕ ಸುಧಾಕರ, ಶರಣಮ್ಮ ಕುಂಬಾರ, ಕಸ್ತೂರಿಬಾಯಿ ಹರಿಜನ, ಈರಯ್ಯ ಭಂಡಾರಿಮಠ, ಮಲ್ಲಮ್ಮ ಕುಂಬಾರ, ಮಡಿವಾಳಪ್ಪ ಮಾದರ, ಸಾಬವ್ವ ಹರಿಜನ, ಸುರೇಖಾ ಜಮಾದಾರ ಸದಸ್ಯರಾಗಿ ಆಯ್ಕೆಯಾಗಿದ್ದಾರೆ ಎಂದು ಮುಖ್ಯಗುರು ಜಿ.ಎನ್.ಪಾಟೀಲ ತಿಳಿಸಿದ್ದಾರೆ.

ನಂತರ ನಡೆದ ಅಭಿನಂದನಾ ಸಮಾರಂಭದಲ್ಲಿ ನೂತನ ಅಧ್ಯಕ್ಷರು, ಉಪಾಧ್ಯಕ್ಷರು, ಸದಸ್ಯರನ್ನು ಗ್ರಾಮದ ಪ್ರಮುಖರಾದ ನಿವೃತ್ತ ಶಿಕ್ಷಕ ಬಿ.ಎನ್.ಪಾಟೀಲ, ಹಿರಿಯ ವಕೀಲ ಬಿ.ಸಿ.ಪಾಟೀಲ, ಬಸವನ ಬಾಗೇವಾಡಿಯ ಬಿಇಓ ಕಛೇರಿಯ ಅಧೀಕ್ಷಕ ಸಿದ್ದನಗೌಡ ಪಾಟೀಲ, ಗ್ರಾಮ ಪಂಚಾಯತಿ ಅಧ್ಯಕ್ಷರ ಪ್ರತಿನಿಧಿ ರವೀಂದ್ರ ಸುಧಾಕರ, ಗ್ರಾಪಂ ಸದಸ್ಯರು ಅಭಿನಂಧಿಸಿದರು.

ಶಾಲೆ ಮುಖ್ಯಗುರು ಜಿ. ಎನ್.ಪಾಟೀಲ, ಉರ್ದು ಶಾಲೆಯ ಮುಖ್ಯಗುರು ಎಮ್.ಎಮ್.ಇಂಡಿ ಹಾಗೂ ಸಿಬ್ಬಂದಿ ಇದ್ದರು.

# ಕಲ್ಯಾಣಿ

**ಸಣ್ಣ ಕಥೆ**

ಡಾಕ್ಟರ್..... ಡಾಕ್ಟರ್ ..ಕೂಗುತ್ತಾ ಬಂದ ಆಟೋ ಚಾಲಕನ ಧ್ವನಿಗೆ, ಶಿಫ್ಟ್ ಮುಗಿಸಿ ಮನೆಗೆ ಹೊರಡುತ್ತಿದ್ದ ಡಾ! ಕರುಣಾಕರ ಓಡಿಬಂದರು. ಪ್ರಜ್ಞೆ ತಪ್ಪಿದ ರಕ್ತಸಿಕ್ತ ದೇಹದ ತರುಣಿಯನ್ನು ತೋಳಲಿ ಎತ್ತಿಕೊಂಡು ನಿಂತಿದ್ದವನನ್ನು ನೋಡಿ ತಕ್ಷಣ ಸ್ಟ್ರೆಚರ್ ತರಿಸಿ, ಆಪರೇಷನ್ ಥಿಯೇಟರಿಗೆ ಕಳಿಸಿ, "ಏನಾಯ್ತು??? ,ಆಕ್ಸಿಡೆಂಟಾ?? ಇವರು ನಿಮಗೇನಾಗಬೇಕು?? "

**ಭಾವರಶ್ಮಿ**



– ಶಾರದಾ ಗುಂಡೂರಾವ್

("ನಮ್ಮ ಕಥಾ ಅರಮನೆ" ಬರಹಗಾರರು)

**ಉದಯರಶ್ಮಿ ದಿನಪತ್ರಿಕೆ**

ಸಾರ್ ನನ್ನ ಆಟೋ ಹತ್ತೋದಕ್ಕೆ ಬರ್ತಿದ್ದರು. ಅಷ್ಟರಲ್ಲಿ ಆ ಕಡೆಯಿಂದ ಒಂದು ಲಾರಿ ಬಂದು ಗುದ್ದಿ ಹೊರಟು ಹೋಯಿತು. ಯಾರೂಂತ ಗೊತ್ತಾಗಲಿಲ್ಲ. ತಕ್ಷಣ ಆಟೋಗೆ ಹಾಕ್ಕೊಂಡು ಇಲ್ಲಿಗೆ ಬಂದೆ ಸಾರ್. ತಕ್ಷಣ ಡಾಕ್ಟರ್ ಪೋಲೀಸ್ ಕಂಪ್ಲೇಂಟ್ ಕೊಟ್ಟು.. ಅವಳ ಚಿಕಿತ್ಸೆಗೆ ಗಮನ ಹರಿಸಿದರು.



ಲಾರಿ ಕಾಲ ಮೇಲೆ ಹರಿದು ಅಪ್ಪಚ್ಚಿ ಮಾಡಿತ್ತು. ಪ್ರಥಮ ಚಿಕಿತ್ಸೆ ಮುಗಿಸಿ, ಸ್ಕ್ಯಾನಿಂಗ್ ನಲ್ಲಿ ನೋಡಿದಾಗ ಕಾಲು ತೆಗೆಯಲೇ ಬೇಕಾಯ್ತು. ಅವಳಿಗೆ ಪ್ರಜ್ಞೆ ಬರುವವರೆಗೆ ಕಾದಿದ್ದು, ನಂತರ ಅವಳ ಕುಶಲೋಪರಿ ವಿಚಾರಿಸಿಕೊಂಡನು.

,"ಡಾಕ್ಟರ್...ನನ್ನ ಜೀವ ಉಳಿಸಿದ್ದಕ್ಕೆ ತುಂಬಾ ಥ್ಯಾಂಕ್ಸ್." " ಏನಾಯ್ತು, ನಿಮ್ಮ ಅಪ್ಪ ಅಮ್ಮ ಎಲ್ಲಿದ್ದಾರೆ ," "ನಾವು ಯಾರಿಗೂ ವಿಷಯ ತಿಳಿಸಿಲ್ಲ. ನಂಬರ್ ಕೊಡಿ ಫೋನ್ ಮಾಡ್ತೀವಿ. "

"ಸಾರಿ ಡಾಕ್ಟರ್... ನನ್ನ ಹೆಸರು ಕಲ್ಯಾಣಿ, ಒ. ಃ. ಃ. ಖ.

ಕೊನೆಯ ವರ್ಷ ಓದುತ್ತಿರುವೆ. ಅಪ್ಪ ಅಮ್ಮ ಡೆಲ್ಲಿಯಲ್ಲಿ ಇದ್ದಾರೆ. ಈಗ ಕಾಲೇಜಿಗೆ ಒಂದು ತಿಂಗಳು ರಜಾ ಇತ್ತು. ಅದಕ್ಕೆ ಅಪ್ಪ ಅಮ್ಮನಿಗೆ ಸರ್ಪ್ರೈಸ್ ಕೊಡೋಣ ಅಂತ ಏರ್ ಪೋರ್ಟ್ ಗೆ ಹೋಗಲು ಆಟೋ ಹತ್ತಲು ಹೋದೆ. ಪಾಪ... ಆಟೋದವ..ಅಲ್ಲೇ ನಿಲ್ಲಿ ನಾನೇ ಆ ಕಡೆ ಬರ್ತೀನಿ ಅಂದರೂ ಕೇಳದೆ ದಾರಿ ಮಧ್ಯೆಗೆ ಹೋಗಿ ಸಿಕ್ಕಿ ಹಾಕಿ ಕೊಂಡೆ. ಅವನದ್ದೇನು ತಪ್ಪಿಲ್ಲ. ಪಾಪ ತಕ್ಷಣ ಇಲ್ಲಿಗೆ ಕರೆದುಕೊಂಡು ಬಂದು ನನ್ನನ್ನು ಉಳಿಸಿದರು. ಹೇಗೂ ಒಂದು ತಿಂಗಳು ರಜಾಇದೆ. ಬೇಗ ಚೇತರಿಸಿ ಕೊಂಡು ನಂತರ ಅಪ್ಪನಿಗೆ ವಿಷಯ ತಿಳಿಸುವೆ"

ಡಾಕ್ಟರ್ ಕೂಡಾ ತುಂಬಾ ಮುತುವರ್ಜಿಯಿಂದ ಅವಳ ಆರೈಕೆ ಮಾಡಿ ವಾಕರ್ ಸಹಾಯದಿಂದ ಓಡಾಡುವಂತೆ ಮಾಡಿದರು. ತಮಗೆ ಬಿಡುವಾದಾಗಲೆಲ್ಲಾ ಅವಳೊಡನೆ ಹರಟುವರು, ಅಲ್ಲೇ ಕಾರಿಡಾರ್ ನಲ್ಲಿ, ನಿಧಾನವಾಗಿ ಓಡಾಡಿಸುವರು.ಬಿಸಿಲಿದ್ದರೆ ಸ್ವಲ್ಪ ದೂರಹಾಗೇ ಛತ್ರಿಹಿಡಿದು ಕೊಂಡು ಹರಟುತ್ತಾ ಸಾಗುವರು. ಇಬ್ಬರ ಸ್ನೇಹ ಬಂಧ ಗಟ್ಟಿಯಾಯಿತು.





ಅಂದು ವಾರ್ಡ್ ಗೆ ರೌಂಡ್ಸಿಗೆ ಬಂದ ಡಾಕ್ಟರ್ "ಹಾಯ್, ಕಲ್ಯಾಣಿ,ಸಂಪೂರ್ಣ ಚೇತರಿಸಿ ಕೊಂಡಿದ್ದೀರಿ ನಾಳೆ ಡಿಸ್ಚಾರ್ಜ್. ಎಲ್ಲಿಗೆ ಹೋಗುವಿರಿ, ಡೆಲ್ಲಿಗೋ, ಪಿ. ಜಿ. ಗೋ,. "

"ಇಲ್ಲ.. ಸೀದಾ ಪಿ.ಜಿ.ಗೆ ಹೋಗಿ ಕಾಲೇಜಿಗೆ ಹೋಗುವೆ

ನನ್ನ ಓದು ಮುಗಿಯುವವರೆಗೆ ಡೆಲ್ಲಿ ಗೆ ಹೋಗೋಲ್ಲ.

ನಿಮ್ಮಿಂದ ತುಂಬಾ ಉಪಕಾರವಾಯ್ತು. ನನ್ನನ್ನು ನಡೆದಾಡಿ ಸಲು ಎಷ್ಟು ಕಷ್ಟ ಪಟ್ಟಿರಿ .ಡಾಕ್ಟರ್ ಗೆ ಬೇಕಾದ ಸಹನೆ, ಆತ್ಮವಿಶ್ವಾಸ, ನಿಮ್ಮಲ್ಲಿದೆ. ಅದನ್ನು ನನಗೂ ಸ್ವಲ್ಪ ಕೊಡಿ. ನನ್ನಣ್ಣನ ಪ್ರೀತಿಯ ಬಳುವಳಿಯನ್ನು ಅಷ್ಟೇ ಪ್ರೀತಿಯಿಂದ ತೆಗೆದುಕೊಂಡು ನಿಮ್ಮಂತಹ ಒಳ್ಳೆಯ ಡಾಕ್ಟರ್ ಎಂದು ಹೆಸರು ತೆಗೆದುಕೊಳ್ಳುವೆ. ಇನ್ನಾರು ತಿಂಗಳು ಕಳೆದು ಮರಗಾಲು ಹಾಕಿಸುವೆ. "

"ಕಲ್ಯಾಣಿ ನಿಮ್ಮ ನಿಷ್ಕಲ್ಮಶ ಮುಗ್ಧಮನಸು ತುಂಬಾ

ಇಷ್ಟವಾಯಿತು. ಯಾವ ಟೈಮಿನಲ್ಲೀ ಕೂಡಾ ನಾನು ನಿಮ್ಮ ಜೊತೆಗಿರುವೆ. ,ಯಾವ ಸಂಕೋಚವೂ ಬೇಡ. ಈ ಪ್ರೀತಿಯ ಅಣ್ಣ, ಮುದ್ದಿನ ತಂಗಿಗೆ ಸದಾ ಬೆಂಗಾವಲಾಗಿ ನಿಲ್ಲುವ .ನೆನಪಿರಲಿ. "

ಆಯ್ತು ಅಣ್ಣ ಡೆಲ್ಲಿಗೆ ಹೋಗುವಾಗ ಜೊತೆಯಲ್ಲಿ ಹೋಗೋಣ. ಅಪ್ಪ ಅಮ್ಮನಿಗೆ ಪರಿಚಯ ಮಾಡಿ ಸುವೆ.. ಈಗ ಹೊರಡುವೆ.. ಮತ್ತೆ ರಾಖಿಯೊಡನೆ ಬರುವೆ. ಬೈ... ಬೈ...

# ಫೆ.12 ರಿಂದ ಶರಣಬಸವೇಶ್ವರ ಪುರಾಣ

**ಉದಯರಶ್ಮಿ ನ್ಯೂಸ್**

ಮುದ್ದೇಬಿಹಾಳ: ಮಾರ್ಚ 5,6,7 ರಂದು ಜರುಗಲಿರುವ ತಾಲೂಕಿನ ಕುಂಟೋಜಿ ಸಂಸ್ಥಾನ ಹಿರೇಮಠದ ಡಾ.ಚನ್ನವೀರ ದೇವರ ಪಟ್ಟಾಧಿಕಾರ ಮಹೋತ್ಸವದ ಅಂಗವಾಗಿ ಕುಂಟೋಜಿಯ ಬಸವೇಶ್ವರ ದೇವಸ್ಥಾನದ ಆವರಣದಲ್ಲಿ ಫೆ.12 ರಿಂದ ಪ್ರತಿದಿನ ಸಂಜೆ 7ಗಂಟೆಗೆ ಮಹಾದಾಸೋಹಿ ಶ್ರೀ ಕಲಬುರ್ಗಿ ಶರಣಬಸವೇಶ್ವರ ಪುರಾಣ ಕಾರ್ಯಕ್ರಮವನ್ನು ಹಮ್ಮಿಕೊಳ್ಳಲಾಗಿದೆ. ಜೊತೆಗೆ ವಾಲಪೋಸ್ಟರ್ ಬಿಡುಗಡೆ ಸಮಾರಂಭ ಸಹ ಜರುಗಲಿದೆ.

ಕಾರ್ಯಕ್ರಮದ ಸಾನಿಧ್ಯ ನಿಡಗುಂದಿಯ ರುದ್ರೇಶ್ವರ ಮಠದ ರುದ್ರಮುನಿ ಶಿವಾಚಾರ್ಯ ಸ್ವಾಮಿಗಳು ವಹಿಸಲಿದ್ದು, ಮಸೂತಿ ಗ್ರಾಮದ ಹಿರೇಮಠದ ಪ್ರಭುಕುಮಾರ ಶಿವಾಚಾರ್ಯ ಸ್ವಾಮಿಗಳು ಉದ್ಘಾಟಿಸುವರು. ಕಮತಗಿಯ ಹೊಳೆಹುಚ್ಚೇಶ್ವರ ಮಹಾಸ್ವಾಮಿಗಳ ನೇತೃತ್ವದಲ್ಲಿ ಸೂಗೂರಿನ ರುದ್ರಮುನೇಶ್ವರ ಮಠದ ಪ್ರವಚನ ಭಾಸ್ಕರ ಎಂದೇ ಖ್ಯಾತರಾದ ರುದ್ರಮುನಿ ಶಿವಾಚಾರ್ಯ ಸ್ವಾಮಿಗಳು, ಬಸವನ ಬಾಗೇವಾಡಿಯ ಒಡೆಯರ ಹಿರೇಮಠದ ಶಿವಪ್ರಕಾಶ ಶಿವಾಚಾರ್ಯ ಸ್ವಾಮಿಗಳು, ಗುಳೇದಗುಡ್ಡದ ಅಮರೇಶ್ವರಮಠದ ನೀಲಕಂಠ ಶಿವಾಚಾರ್ಯ ಸ್ವಾಮಿಗಳು ಪುರಾಣ ನುಡಿಗಳನ್ನಾಡಲಿದ್ದು, ಗುಂಡಕನಾಳದ ಗುರುಲಿಂಗ ಶಿವಾಚಾರ್ಯ ಸ್ವಾಮಿಗಳು, ಬಾದಾಮೆಯ ಶಿವಪೂಜೆ ಶಿವಾಚಾರ್ಯ ಸ್ವಾಮಿಗಳು, ತಾಳೊಕೋಟೆಯ ಸಿದ್ಧಲಿಂಗ ದೇವರು, ಹುನಶ್ಯಾಳದ ಆನಂದ ದೇವರು ಸಮ್ಮುಖದಲ್ಲಿ ಶಾಸಕ ಸಿ.ಎಸ್.ನಾಡಗೌಡ, ಮಾಜಿ ಶಾಸಕ ಎ.ಎಸ್.ಪಾಟೀಲ ನಡಹಳ್ಳಿ, ಜಿಲ್ಲಾ ಪಂಚಾಯತ ಮಾಜಿ ಉಪಾಧ್ಯಕ್ಷ ಪ್ರಭುಗೌಡ ದೇಸಾಯಿ, ಪ್ರಮುಖರಾದ ಸಂಹನಗೌಡ ಪಾಟೀಲ, ಗುರುಲಿಂಗಪ್ಪ ಸುಳ್ಳೋಳ್ಳಿ ಮುಖ್ಯ ಅತಿಥಿಗಳಾಗಿ ಆಗಮಿಸಲಿದ್ದಾರೆ ಎಂದು ಪ್ರಕಟಣೆ ತಿಳಿಸಿದೆ.

# ಜನ್ಮದಿನಕ್ಕೆ ಶಾಲಾ ಮಕ್ಕಳಿಗೆ ನೋಟಬುಕ್ ವಿತರಿಸಿದ ಯುವಕ



ಉದಯರಶ್ಮಿ ನ್ಯೂಸ್

ತಿಕೋಟಾ: ವಿಜೃಂಭಣೆಯಿಂದ ತನ್ನ ಹುಟ್ಟು ಹಬ್ಬವನ್ನು ಆಚರಿಸದೇ ದುಂದು ವೆಚ್ಚಕ್ಕೆ ಸಾವಿರಾರು ರೂಪಾಯಿ ಹಣ ವ್ಯಯ ಮಾಡದೆ ಕಡಿವಾಣ ಹಾಕಿ ಅದೇ ಹಣದಿಂದ ಸರ್ಕಾರಿ ಶಾಲೆಯಲ್ಲಿ ಓದುತ್ತಿರುವ ಬಡ ವಿದ್ಯಾರ್ಥಿಗಳಿಗೆ ಶುಕ್ರವಾರ ನೋಟಬುಕ್ ಹಾಗೂ ಪೆನ್ನು ವಿತರಿಸಿ ವಿಶೇಷವಾಗಿ ತನ್ನ 21ನೇಯ ಹುಟ್ಟು ಹಬ್ಬ ಆಚರಣೆ ಮಾಡಿಕೊಂಡು ಯುವ ಪೀಳಿಗೆಗೆ ಯುವಕನೊಬ್ಬ ಮಾದರಿಯಾಗಿದ್ದಾನೆ.

ಹೌದು, ತಾಲ್ಲೂಕಿನ ಕಳ್ಳಕವಟಗಿ ಗ್ರಾಮದ ಸಚಿನ ಹಣಮಂತ ಗದ್ಯಾಳ ಎಂಬ ಯುವಕ ಮೂರು ವರ್ಷದಿಂದ ಪ್ರತಿ ವರ್ಷ ▯ 50 ಸಾವಿರ ವೆಚ್ಚ ಮಾಡಿ ನೋಟಬುಕ್, ಪೆನ್ನು ಹಾಗೂ ಮಕ್ಕಳಿಗೆ ಸಿಹಿ ವಿತರಿಸಿ ಸರ್ಕಾರಿ ಶಾಲೆಯಲ್ಲಿ ಓದುತ್ತಿರುವ ಬಡ ಮಕ್ಕಳ ವಿಧ್ಯಾಭ್ಯಾಸಕ್ಕೆ ಸಹಾಯ ಮಾಡಿದ್ದಾನೆ.

ಗ್ರಾಮದ ಸರ್ಕಾರಿ ಕಿರಿಯ ಪ್ರಾಥಮಿಕ ಶಾಲೆ ವಾಲಿಕಾರವಸ್ತಿ ಹಾಗೂ ಉಪ್ಪಾರವಸ್ತಿ, ಹಿರಿಯ ಪ್ರಾಥಮಿಕ ಶಾಲೆ ಕಳ್ಳಕವಟಗಿ ಹಾಗೂ ತಾಂಡಾ ಶಾಲೆ, ಪ್ರೌಢ ಶಾಲೆ ಹಾಗೂ ಸಂಗಮನಾಥ ಕಿರಿಯ ಪ್ರಾಥಮಿಕ ಶಾಲೆಗಳ ಒಟ್ಟು ಐದನೂರಕ್ಕೂ ಹೆಚ್ಚು ಮಕ್ಕಳಿಗೆ ನೋಟಬುಕ್ ವಿತರಿಸಿ ಕಿರಿಯ ವಯಸ್ಸಿನಲ್ಲೆ ಶೈಕ್ಷಣಿಕ ಸೇವೆ ಮಾಡುತ್ತಿದ್ದಾನೆ.

ದುಂದು ವೆಚ್ಚ ಮಾಡಿ ಹುಟ್ಟು ಹಬ್ಬ ಆಚರಿಸಿಕೊಳ್ಳದೇ ಅದೇ ಹಣದಿಂದ ಬಡ ಮಕ್ಕಳಿಗೆ ಸಹಾಯ ಆಗಲಿ ಎಂಬ ಉದ್ದೇಶದಿಂದ ಸಮಾಜಕ್ಕೆ ನನ್ನ ಕೈಲಾದಷ್ಟು ಸಹಾಯ ಮಾಡಿದ್ದೇನೆ ಎಂದು ಯುವಕ ಸಚಿನ ಗದ್ಯಾಳ "ಉದಯರಶ್ಮಿ" ಗೆ ತಿಳಿಸಿದರು.

ಈ ಸಂದರ್ಭದಲ್ಲಿ ಪರಮಾನಂದ ಕಣಮುಚನಾಳ, ಮಲ್ಲನಗೌಡ



ಬಿರಾದಾರ, ರಾಜೇಂದ್ರ ಶಿರದವಾಡ, ಸಂತೋಷ ಗಿಡ್ನವರ, ನಾಗರಾಜ ಗದ್ಯಾಳ, ಶಿಕ್ಷಕರು ಹಾಗೂ ಮಕ್ಕಳು ಇದ್ದರು.

## ವೈಮಾನಿಕ ಉತ್ಪಾದನೆಯ ಹೊಸ ತಾಣವಾಗಿ ಉದಯವಾಗುತ್ತಿರುವ ಭಾರತ

# ಬೆಂಗಳೂರು ಘಟಕದಲ್ಲಿ ಏರ್ ಬಸ್ ಎ220 ಬಾಗಿಲುಗಳ ಉತ್ಪಾದನೆ

ಉದಯರಶ್ಮಿ ನ್ಯೂಸ್

ಮೂಲಭೂತ ಸೌಕರ್ಯಗಳ ಸುಧಾರಣೆ ಮತ್ತು ಸರ್ಕಾರ ಹೆಚ್ಚಿನ ಒತ್ತು ನೀಡುವುದರಿಂದ ಭಾರತದಲ್ಲಿ ಏರೋಸ್ಪೇಸ್ ಉತ್ಪಾದನೆಯು ವೇಗ ಪಡೆದುಕೊಂಡಿದೆ.

ಏರೋ ಸ್ಟ್ರಕ್ಚರ್‌ಗಳು, ಕಾಂಪೊನೆಂಟ್‌ಗಳು, ಸಬ್-ಅಸೆಂಬ್ಲಿಗಳು ಮತ್ತು ಸಂಕೀರ್ಣ ಸಿಸ್ಟಮ್ ಅಸೆಂಬ್ಲಿಗಳಿಗೆ ಆದ್ಯತೆಯ ತಾಣವಾಗಿ ಭಾರತವನ್ನು ಅಭಿವೃದ್ಧಿಪಡಿಸುವಲ್ಲಿ ಅನೇಕ ಖಾಸಗಿ ಕಂಪನಿಗಳು ತ್ವರಿತ ಪ್ರಗತಿಯನ್ನು ಸಾಧಿಸಿವೆ.

ಪ್ರಮುಖ ಜಾಗತಿಕ ಮೂಲ ಸಲಕರಣೆ ತಯಾರಕರು ಏರೋಸ್ಪೇಸ್ ಸಂಬಂಧಿತ ಭಾಗಗಳು ಮತ್ತು ಅಸೆಂಬ್ಲಿ-ಬೈಗಳ ತಯಾರಿಕೆಗಾಗಿ ಭಾರತದಲ್ಲಿ ಜಂಟಿ ಉದ್ಯಮಗಳನ್ನು ಸ್ಥಾಪಿಸಿದ್ದು, ಇದು ಅನೇಕ ವಾಣಿಜ್ಯ ಮತ್ತು ರಕ್ಷಣಾ ವಿಮಾನಗಳು ಮತ್ತು ಹೆಲಿಕಾಪ್ಟರ್‌ಗಳಿಗೆ ದಾರಿ ಮಾಡಿಕೊಡುತ್ತದೆ.

ಭಾರತದಲ್ಲಿ ಸಿಂಗಲ್ ಅಸೈಲ್ ಎ220 ಫ್ಯಾಮಿಲಿ ಏರ್ ಕ್ರಾಫ್ಟ್ ಗಾಗಿ ಎಲ್ಲಾ ಬಾಗಿಲು(ಡೋರ್ )ಗಳನ್ನು ತಯಾರಿಸಲು ಬೆಂಗಳೂರು ಮೂಲದ ಡೈನಾಮ್ಯಾಟಿಕ್ ಟೆಕ್ನಾಲಜೀಸ್ ಕಂಪನಿಯೊಂದಿಗೆ ಪ್ರಮುಖ ವಿಮಾನ ತಯಾರಕ ಏರ್‌ಬಸ್ ಕೈಜೋಡಿಸುತ್ತಿರುವುದು ಹೊಸ ಸೇರ್ಪಡೆಯಾಗಿದೆ.




ಈ ಒಪ್ಪಂದವು ಮಹತ್ವದ ಮೈಲಿಗಲ್ಲಾಗಿ ಗುರುತಿಸುವುದಲ್ಲದೆ, ಮೇಕ್ ಇನ್ ಇಂಡಿಯಾ ಉಪಕ್ರಮದ ಯಶಸ್ಸನ್ನು ಬಿಂಬಿಸುತ್ತದೆ.

ಒಪ್ಪಂದದ ಪ್ರಕಾರ, ಡೈನಾಮಿಕ್ ಟೆಕ್ನಾಲಜೀಸ್ ಎ220 ಕೌಟುಂಬಿಕ ವಿಮಾನ( ಪ್ರತಿ ವಿಮಾನಗಳಿಗೆ ಎಂಟು ದ್ವಾರಗಳಿರುತ್ತವೆ) ಏವರ್ ವಿಂಗ್ ತುರ್ತು ನಿರ್ಗಮನ ದ್ವಾರಗಳ ಜತೆಗೆ ಸರಕು, ಪ್ರಯಾಣಿಕ ಮತ್ತು ಸೇವಾ ವಿಮಾನಗಳ ಬಾಗಿಲುಗಳ ಉತ್ಪಾದನೆ ಮತ್ತು ಅವುಗಳನ್ನು ಜೋಡಿಸುವ ಕಾರ್ಯವನ್ನು ಮಾಡಲಿದೆ. ವಿಮಾನಗಳ ಬಾಗಿಲುಗಳು ಅತ್ಯಂತ ಸಂಕೀರ್ಣ ರಚನೆಗಳಾಗಿವೆ, ಸುರಕ್ಷತೆ ಮತ್ತು ಒಟ್ಟಾರೆ ದಕ್ಷತೆಗಾಗಿ ಕಠಿಣ ಅವಶ್ಯಕತೆಗಳನ್ನು ಪೂರೈಸಲು ಸುಧಾರಿತ ತಂತ್ರಜ್ಞಾನಗಳನ್ನು ಸಂಯೋಜಿಸುತ್ತವೆ.

ಇದು ಏರ್ ಬಸ್ ಸಂಸ್ಥೆ ಭಾರತೀಯ ಪೂರೈಕೆದಾರರಿಗೆ ನೀಡುತ್ತಿರುವ ಬಾಗಿಲುಗಳ (ಡೋರ್) ಉತ್ಪಾದನೆಯ ಎರಡನೇ ಗುತ್ತಿಗೆಯಾಗಿದೆ. ಇದಕ್ಕೂ ಮುನ್ನ 2023ರಲ್ಲಿ ಏರ್ ಬಸ್ ಎ320 ಫ್ಯಾಮಿಲಿಗೆ ದೊಡ್ಡ ಮಟ್ಟದಲ್ಲಿ ಮತ್ತು ಸರಕು ಸಾಗಾಣೆ ವಿಮಾನಗಳಿಗೆ ಬಾಗಿಲುಗಳನ್ನು ಉತ್ಪಾದಿಸಲು ಏರ್ ಬಸ್ ಸಂಸ್ಥೆ ಟಾಟಾ ಅಡ್ವಾನ್ಸ್ಡ್ ಸಿಸ್ಟಂ ಲಿಮಿಟೆಡ್ ಗೆ ಗುತ್ತಿಗೆಯನ್ನು ನೀಡಿತ್ತು.

ಇಂದು, ಪ್ರತಿ ಏರ್ ಬಸ್ ವಾಣಿಜ್ಯ ವಿಮಾನ ಮತ್ತು ಪ್ರತಿ ಏರ್ ಬಸ್ ಹೆಲಿಕಾಪ್ಟರ್‌ಗಳು ನಿರ್ಣಾಯಕ ತಂತ್ರಜ್ಞಾನಗಳು ಮತ್ತು ವ್ಯವಸ್ಥೆಗಳನ್ನು ಭಾರತದಲ್ಲಿ ವಿನ್ಯಾಸಗೊಳಿಸಿ, ತಯಾರಿಸಿ ಮತ್ತು ನಿರ್ವಹಿಸುತ್ತಿವೆ. ಏರ್‌ಬಸ್ ಸ್ಥಳೀಯ ತಯಾರಕರ ಸಹಭಾಗಿತ್ವದಲ್ಲಿ ಭಾರತದಲ್ಲಿ ಸುಮಾರು 10,000 ಉದ್ಯೋಗಗಳನ್ನು ಬೆಂಬಲಿಸುತ್ತದೆ. 2025ರ ವೇಳೆಗೆ, ಈ ಸಂಖ್ಯೆಯು ಸುಮಾರು 15,000 ಕ್ಕೆ ಹೆಚ್ಚಳವಾಗುವ ಸಾಧ್ಯತೆಯಿದೆ ಮತ್ತು ಕಂಪನಿಯು ಭಾರತದಿಂದ 750 ಮಿಲಿಯನ್ ಅಮೆರಿಕನ್ ಡಾಲರ್ ನಿಂದ 1.5 ಬಿಲಿಯನ್ ಅಮೆರಿಕನ್ ಡಾಲರ್ ಗೆ ತನ್ನ ಖರೀದಿ ಪ್ರಮಾಣವನ್ನು ದ್ವಿಗುಣಗೊಳಿಸುವ ನಿರೀಕ್ಷೆಯಿದೆ.

3,600 ನಾಟಿಕಲ್ ಮೈಲುಗಳವರೆಗೆ (6,700 ಕಿಲೋಮೀಟರ್) ಮತ್ತು 100 ರಿಂದ 160 ಪ್ರಯಾಣಿಕರಿಗೆ ಆಸನ ಸಾಮರ್ಥ್ಯದೊಂದಿಗೆ, ಎ220 ಭಾರತದ ಉಡಾನ್ ಯೋಜನೆಗೆ ಸೂಕ್ತವಾಗಿ ಹೊಂದಿಕೆಯಾಗುತ್ತದೆ, ಇದು ಪ್ರಾದೇಶಿಕ ಸಂಪರ್ಕವನ್ನು ಹೆಚ್ಚಿಸುವ ಮತ್ತು ದೇಶಾದ್ಯಂತ ಆರ್ಥಿಕ ಬೆಳವಣಿಗೆ ಉತ್ತೇಜಿಸುವ ಗುರಿಯನ್ನು ಹೊಂದಿದೆ.

ಕೇಂದ್ರ ನಾಗರಿಕ ವಿಮಾನಯಾನ ಸಚಿವ ಜ್ಯೋತಿರಾದಿತ್ಯ ಸಿಂಧಿಯಾ ಅವರು ಈ ಪಾಲುದಾರಿಕೆಯನ್ನು ಶ್ಲಾಘಿಸಿದ್ದಾರೆ. ಅವರು "ಭಾರತವು ವಿಶ್ವದಾದ್ಯಂತ ಏರೋಸ್ಪೇಸ್ ಉತ್ಪಾದನೆಗೆ ಸ್ಥಿರ ತಾಣವಾಗುತ್ತಿದೆ. ಡೈನಾಮ್ಯಾಟಿಕ್ ಟೆಕ್ನಾಲಜೀಸ್‌ಗೆ ವಿಮಾನದ ಬಾಗಿಲುಗಳ ಗುತ್ತಿಗೆ ದೊರಕಿರುವ ದೊಡ್ಡ ಬೇಡಿಕೆಯು ಪ್ರಧಾನ ಮಂತ್ರಿ ಅವರ 'ಮೇಕ್ ಇನ್ ಇಂಡಿಯಾ, ಮೇಕ್ ಫಾರ್ ದಿ ವರ್ಲ್ಡ್' ಸಂಕಲ್ಪಕ್ಕೆ ಉತ್ತಮ ಕ್ಷಣವಾಗಿದೆ. ಸರ್ಕಾರದ ವ್ಯಾಪಾರಿ ಪರ ನೀತಿಗಳು ಭಾರತವು ಹೆಚ್ಚು ಹೆಚ್ಚು ಪ್ರಮುಖ ಏರೋಸ್ಪೇಸ್ ಉತ್ಪಾದನಾ ದೇಶವಾಗಲು ಸಹಾಯ ಮಾಡುತ್ತಿದೆ ಎಂದು ಸಚಿವರು ಹೇಳಿದರು.

## ಮೋರಟಗಿ–ಮುತ್ತಗಿಯಲ್ಲಿ ಸಂವಿಧಾನ ಜಾಗೃತಿ ಜಾಥಾಕ್ಕೆ ಅದ್ದೂರಿ ಸ್ವಾಗತ

# ಮೋರಟಗಿ–ಯರನಾಳ : ಸಂವಿಧಾನ ಪೀಠಿಕೆ ಬೋಧನೆ

ಉದಯರಶ್ಮಿ ನ್ಯೂಸ್

ವಿಜಯಪುರ: ಭಾರತದ ಸಂವಿಧಾನವು ದಿನವು ಐತಿಹಾಸಿಕ ಹಾಗೂ ಸಾಂಕೇತಿಕ ಮಹತ್ವವನ್ನು ಹೊಂದಿದೆ ಎಂದು ಗ್ರಾಮ ಪಂಚಾಯತ್ ಅಧ್ಯಕ್ಷೆ ಗೌರಮ್ಮ ನಡುವಿನಕೇರಿ ಹೇಳಿದರು.



ವಿಜಯಪುರ ಜಿಲ್ಲೆಯ ಆಲಮೇಲ ತಾಲೂಕಿನ ಮೋರಟಗಿ ಗ್ರಾಮದಲ್ಲಿ ಜಿಲ್ಲಾ ಪಂಚಾಯಿತಿ ಮತ್ತು ಸಮಾಜ ಕಲ್ಯಾಣ ಇಲಾಖೆ ವತಿಯಿಂದ ಹಮ್ಮಿಕೊಂಡ ಸಂವಿಧಾನ ಜಾಗೃತಿ ಜಾಥಾದ ಕಾರ್ಯಕ್ರಮವನ್ನು ಉದ್ದೇಶಿಸಿ ಅವರು ಮಾತನಾಡಿದರು.

ಸಂವಿಧಾನ ಜಾಗೃತಿ ಜಾಥಾ ರಥಯಾತ್ರೆಯನ್ನು ಅದ್ದೂರಿಯಾಗಿ ಬರಮಾಡಿ ಕೊಳ್ಳಲಾಯಿತು. ಶಾಲಾ ಮಕ್ಕಳಿಂದ ನಾನಾ ಸಾಂಸ್ಕೃತಿಕ ಕಾರ್ಯಕ್ರಮಗಳು, ಮಹಿಳೆಯರಿಂದ ಕುಂಭಮೇಳ, ಸಾರ್ವಜನಿಕರು, ವಿದ್ಯಾರ್ಥಿಗಳಿಂದ ಸಂವಿಧಾನ ಪೀಠಿಕೆ ಓದುವುದರ ಮೂಲಕ ಪ್ರಮಾಣ ಮಾಡಲಾಯಿತು. ಸಂವಿಧಾನ ಜಾಗೃತಿ ಜಾಥಾದ ಸ್ತಬ್ಧಚಿತ್ರವು ಗುತ್ತರಗಿ, ಗಬಸಾವಳಿಗಿ ಗ್ರಾಮಗಳಲ್ಲಿ ಸಂಚರಿಸಿ ಸಂವಿಧಾನ ಕುರಿತು ಜಾಗೃತಿ ಮೂಡಿಸಿತು.

ಈ ಸಂದರ್ಭದಲ್ಲಿ ನೋಡಲ್ ಅಧಿಕಾರಿಗಳಾದ ತಾರಾನಾಥ ರಾಠೋಡ, ಮುಖ್ಯ ಅಧಿಕಾರಿಗಳು ಪಟ್ಟಣ ಪಂಚಾಯತ್ ಮೋರಡಗಿ, ಪಿ.ಡಿ.ಓ ರಾಘವೇಂದ್ರ, ಸಮಾಜ ಕಲ್ಯಾಣ ಸಹಾಯಕ ನಿರ್ದೇಶಕರು ಶಿವಲಿಂಗಪ್ಪ ಹಚಡದ, ಉಪಾಧ್ಯಕ್ಷರು ದೌಲಬಿ ನಡುವುನಕೇರಿ, ಅಧಿಕಾರಿಗಳು ಸಾರ್ವಜನಿಕರು ಉಪಸ್ಥಿತರಿದ್ದರು.

ಬಸವನಬಾಗೇವಾಡಿ: ಮುತ್ತಗಿಯಲ್ಲಿ ಅದ್ದೂರಿ ಸ್ವಾಗತ- ಸಂವಿಧಾನ ಜಾಗೃತಿ ಜಾಥಾದ ಸ್ತಬ್ಧಚಿತ್ರವು ಶನಿವಾರ ಜಿಲ್ಲೆಯ ಬಸವನಬಾಗೇವಾಡಿ ತಾಲೂಕಿನ ಮುತ್ತಗಿ ಗ್ರಾಮ ಪಂಚಾಯತಿಯಲ್ಲಿ ಸಂಚರಿಸಿದ ರಥಕ್ಕೆ ಅದ್ದೂರಿಯಾಗಿ ಸ್ವಾಗತಿಸಿ ಸಾಮೂಹಿಕವಾಗಿ ಸಂವಿಧಾನ ಪೀಠಿಕಾ ಭಾಗ ಪ್ರತಿಜ್ಞೆ ಬೋಧಿಸಲಾಯಿತು.

ಮುತ್ತಗಿ ಗ್ರಾಮದಿಂದ ಯರನಾಳ ಕಡೆ ಸಂಚರಿಸಿದ ಜಾಥಾ ರಥಕ್ಕೆ ಗ್ರಾಮ ಪಂಚಾಯತ್ ಅಧ್ಯಕ್ಷರು, ಸದಸ್ಯರು, ಗ್ರಾಮಸ್ಥರು, ಯುವಕರು, ಸೇರಿದಂತೆ ಸಂವಿಧಾನ ಜಾಗೃತಿ ಜಾಥಾದ ರಥಯಾತ್ರೆಗೆ ಪುಷ್ಪನಮನ ಸಲ್ಲಿಸಿ, ಬಳಿಕ ಮುಖ್ಯ ರಸ್ತೆಯಿಂದ ಮೆರವಣಿಗೆದೊಂದಿಗೆ ಅದ್ದೂರಿಯಾಗಿ ಸ್ವಾಗತಿಸಿದರು.

ದೇಶದ ಪ್ರತಿಯೊಬ್ಬ ಪ್ರಜೆಯೂ ಸಂವಿಧಾನ ಓದಿ ಜೀವನಕ್ಕೆ ನ್ಯಾಯಯುತ ರಕ್ಷಣೆ ಪಡೆದುಕೊಳ್ಳಬೇಕು ಎಂದು ಕೆ.ಬಿ. ಎಸ್. ಕತ್ತರಕಿಹಾಳ ಶಿಕ್ಷಕರು ಮಾದವ ಗುಡಿ ಹೇಳಿದರು.

ವಿಜಯಪುರ ಜಿಲ್ಲೆಯ ಬಸವನಬಾಗೇವಾಡಿ ತಾಲೂಕಿನ ಯರನಾಳ ಗ್ರಾಮದಲ್ಲಿ ಸಮಾಜ ಕಲ್ಯಾಣ ಇಲಾಖೆ ವತಿಯಿಂದ ಹಮ್ಮಿಕೊಂಡ ಸಂವಿಧಾನ ಜಾಗೃತಿ ಜಾಥಾದ ಅಭಿಯಾನವನ್ನು ಉದ್ದೇಶಿಸಿ ಅವರು ಮಾತನಾಡಿದರು.

ತಹಸಿಲ್ದಾರ ಜಿ.ಎಸ್.ನಾಯಕ ಮಾತನಾಡಿ, ಹುಟ್ಟಿನಿಂದ ಸಾವಯವವರಿಗೆ ಒಂದಲ್ಲ ಒಂದು ಕಾನೂನಿನಡಿ ಬದುಕಬೇಕಿದೆ. ನೆಮ್ಮದಿ ಬದುಕಿಗೆ ಕಾನೂನು ಅವಶ್ಯವಿದೆ. ಕಾನೂನು ತಿಳಿವಳಿಕೆ ಅವಶ್ಯವಿದೆ. ಸಂವಿಧಾನವನ್ನು ಓದಿ ತಿಳಿದುಕೊಳ್ಳಬೇಕು ಎಂದು ತಿಳಿಸಿದರು.

ಈ ಸಂದರ್ಭದಲ್ಲಿ ಗ್ರಾಮ ಪಂಚಾಯತ್ ಅಧ್ಯಕ್ಷರಾದ ಶಾಂತಪ್ಪ ಕೊಲಕಾರ, ಪಿ.ಡಿ.ಓ ಅಧಿಕಾರಿಗಳಾದ ರವಿ ಗುಂಡಳ್ಳಿ, ನೋಡಲ ಅಧಿಕಾರಿಗಳಾದ ಎಮ್. ಹೆಚ್. ಯರಝರಿ, ಉಪಾಧ್ಯಕ್ಷರಾದ ಹಣಮಂತ ಹಾದಿಮನಿ, ಬೀರಲಿಂಗೇಶ್ವರ ಪಟ್ಟದ ಪೂಜಾರಿಗಳಾದ ಭೀಮಪ್ಪ ಮುತ್ಯಾ, ಬಿ.ಆರ್.ಪಿ ಭಾರತಿ ಪಾಟೀಲ್. ಆರ್.ಪಿ ಮನಗುಳಿ ಎಸ್.ಬಿ.ಸಜ್ಜನ ಪಂಚಾಯತ್ ಅಭಿವೃದ್ಧಿ ಅಧಿಕಾರಿಗಳು, ಸಮಾಜ ಕಲ್ಯಾಣ ಸಹಾಯಕ ನಿರ್ದೇಶಕರಾದ ಅಧಿಕಾರಿಗಳು, ಸಂಘಟನೆ ಪದಾಧಿಕಾರಿಗಳು ವಿವಿಧ ಮುಖಂಡರು, ಅಧಿಕಾರಿಗಳು, ಮತ್ತು ಹಿರಿಯರು ಉಪಸ್ಥಿತರಿದ್ದರು.

ಬಸವನಬಾಗೇವಾಡಿ ತಾಲೂಕಿನ ಯರನಾಳ ಗ್ರಾಮದಲ್ಲಿ ಸಮಾಜ ಕಲ್ಯಾಣ ಇಲಾಖೆ ವತಿಯಿಂದ ಹಮ್ಮಿಕೊಂಡ ಸಂವಿಧಾನ ಜಾಗೃತಿ ಜಾಥಾ ಕಾರ್ಯಮದಲ್ಲಿ ಸಂವಿಧಾನ ಪೀಠಿಕೆ ಓದಿ ಪ್ರಮಾಣ ವಚನ ಮಾಡಲಾಯಿತು.

# ಜ್ಞಾನ ಭಾರತಿ ಶಾಲೆಯಲ್ಲಿ ಕಾಯಕ ಶರಣರ ಜಯಂತಿ



ಉದಯರಶ್ಮಿ ನ್ಯೂಸ್

ಮುದ್ದೇಬಿಹಾಳ: ಪಟ್ಟಣದ ಜ್ಞಾನ ಭಾರತಿ ವಿದ್ಯಾ ಮಂದಿರ ಸಮೂಹ ಶಿಕ್ಷಣ ಸಂಸ್ಥೆಯಲ್ಲಿ ಕಾಯಕ ಶರಣರ ಜಯಂತಿಯನ್ನು ಆಚರಿಸಲಾಯಿತು. ಈ ವೇಳೆ ಪ್ರೌಢ ಶಾಲಾ ಮುಖ್ಯೋಪಾಧ್ಯಾಯ ರಾಮಚಂದ್ರ ಹೆಗಡೆ, ಸಂಸ್ಥೆಯ ನಿರ್ದೇಶಕರುಗಳಾದ ಲೀಲಾ ಭಟ್ಟ, ಶಾಂತಾ ಭಟ್ಟ, ಪ್ರಾಥಮಿಕ ಮುಖ್ಯಗುರು ಜಿ.ಜೆ.ಪಾದಗಟ್ಟಿ, ಆಂಗ್ಲ ಮಾಧ್ಯಮ ಮುಖ್ಯಗುರುಮಾತೆ ರಂಜಿತಾ ಹೆಗಡೆ, ಶಿಕ್ಷಕರಾದ ಬಿ.ಟಿ.ಭಜಂತ್ರಿ, ಬಸವರಾಜ ಸೋನಾರ್, ಶಿವಶಂಕರಯ್ಯ ಮಠ, ಕೀರ್ತಿ ತಳಗೇರಿ, ತೇಜಸ್ವಿನಿ ಕಾಟಿ, ಸೇರಿದಂತೆ ಇತರರು ಉಪಸ್ಥಿತರಿದ್ದರು.

# ಅಧ್ಯಯನದಿಂದ ಅಧ್ಯಾತ್ಮ ಶಕ್ತಿ :ಬಿ.ಕೆ.ಯಮೂನಾಜಿ

ಉದಯರಶ್ಮಿ ನ್ಯೂಸ್



ಚಡಚಣ: ಎಲ್ಲ ಧರ್ಮಗಳೂ ಪರಮಾತ್ಮನನ್ನು ಜ್ಯೋತಿ ರೂಪದಲ್ಲಿ ಕಾಣುತ್ತವೆ. ಅಂತಹ ಜ್ಯೋತಿಯು ನಮ್ಮ ಆತ್ಮದ ಜೊತೆ ಅನುಸಂಧಾನ ಹೊಂದಿರಬೇಕು. ಇಂಥಹ ಆಂತರಿಕ ಶಕ್ತಿಯು ಧ್ಯಾನದಿಂದ ಬರುತ್ತದೆ. ವ್ಯಾಯಾಮದಿಂದ ದೈಹಿಕ ಹಾಗೂ ವ್ಯವಹಾರದಿಂದ ಆರ್ಥಿಕ ಶಕ್ತಿ ಸಂಪಾದಿಸಿದರೆ, ಅಧ್ಯಯನದಿಂದ ಅಧ್ಯಾತ್ಮ ಶಕ್ತಿ ಪಡೆಯಬಹುದು ಎಂದು ಇಂಡಿ ತಾಲೂಕಾ ಬ್ರಹ್ಮಕುಮಾರಿ ಈಶ್ವರೀಯ ಅಧ್ಯಯನ ಕೇಂದ್ರದ ಸಂಚಾಲಕಿ ಬಿ.ಕೆ.ಯಮೂನಾಜಿಯವರು ಹೇಳಿದರು.

ಪಟ್ಟಣದಿಂದ ಪ್ರಜಾಪೀತ ಬ್ರಹ್ಮಕುಮಾರಿ ವಿಶ್ವವಿದ್ಯಾನಿಲಯದ ವತಿಯಿಂದ ಪಟ್ಟಣದಿಂದ ರಾಜಸ್ಥಾನ ಮೌಂಟ್ ಅಬುವಿಗೆ 40 ಯಾತ್ರಾರ್ಥಿಗಳು ಅಧ್ಯಾತ್ಮಿಕ ದರ್ಶನಕ್ಕೆ ತೆರಳುತ್ತಿದ್ದು, ಈ ಕಾರ್ಯಕ್ರಮಕ್ಕೆ ಚಾಲನೆ ನೀಡಿ ಮಾತನಾಡಿದ ಅವರು, ನಮ್ಮ ಮಾತುಗಳಿಗಿಂತ ಕೃತಿಗೆ ಬೆಲೆ ಇರುತ್ತದೆ. ಅದಕ್ಕೆ ನೈತಿಕತೆ, ಏಕಾಗ್ರತೆ, ಬದ್ಧತೆಗಳೆಲ್ಲ ಮುಖ್ಯವಾಗುತ್ತದೆ. ಈ ಗುಣಗಳು ಅಧ್ಯಾತ್ಮದಿಂದ ಬರುತ್ತವೆ ಎಂದು ಹೇಳಿದರು.

ಈ ವೇಳೆಯಲ್ಲಿ ಬ್ರಹ್ಮಕುಮಾರಿ ಈಶ್ವರೀಯ ಅಧ್ಯಯನ ಕೇಂದ್ರ ಚಡಚಣದ ಸಂಚಾಲಕಿ ಬಿ.ಕೆ.ಶ್ರೀದೇವಿ ಅಕ್ಕನವರು ಮಾತನಾಡುತ್ತ, ನಮ್ಮ ಚೇತನ ಅನಿಕೇತನ ಆಗಬೇಕು. ಬದುಕಿನಲ್ಲಿ ಆತ್ಮವಿಶ್ವಾಸ, ಸ್ವಾಭಿಮಾನ ತುಂಬಬೇಕು. ಕೀಳರಿಮೆ, ಮೇಲು-ಕೀಳು ಭಾವನೆಗಳನ್ನು ಹೊರಹಾಕಬೇಕು. ನಾವೆಲ್ಲ ಮಾನವರಾಗಬೇಕು ಎಂದರು.

ಈ ವೇಳೆಯಲ್ಲಿ ಗಂಗಾಧರ ಗಿಡವೀರ ದಂಪತಿಗಳು, ರಾಜು ಸರಸಂಬಿ ದಂಪತಿಗಳು, ಸಂಗಪ್ಪ ಪಾವಲೆ ದಂಪತಿಗಳು, ವಿನಾಯಕ ಕರಜಗಿ ದಂಪತಿಗಳು, ಎಂ.ಜಿ.ಸಾಂಗೋಲಿ ಪರಿವಾರ ಸೇರಿದಂತೆ ಪಟ್ಟಣದ ಇತರ ಯಾತ್ರಿಕರು ಯಾತ್ರೆ ಕೈಗೊಂಡರು.

# ಭೀಮಾಶಂಕರ ಸಕ್ಕರೆ ಕಾರ್ಖಾನೆ ಚುನಾವಣೆ :ನಿಷೇಧಾಜ್ಞೆ ಜಾರಿ

ಉದಯರಶ್ಮಿ ನ್ಯೂಸ್

ಇಂಡಿ: ತಾಲ್ಲೂಕಿನ ಮರಗೂರ ಭೀಮಾಶಂಕರ ಸಕ್ಕರೆ ಕಾರ್ಖಾನೆ ಆಡಳಿತ ಮಂಡಳಿ ನಿರ್ದೇಶಕರ ಚುನಾವಣೆ ಹಿನ್ನೆಲೆ ಭಾನುವಾರ (ಫೆ 10) ಸಾಯಂಕಾಲ 5 ಗಂಟೆಯಿಂದ (ಫೆ. 12) ಬೆಳಿಗ್ಗೆ 7 ಗಂಟೆಯವರೆಗೆ ದಂಡ ಪ್ರಕ್ರಿಯಾ ಸಂಹಿತೆ 1973ರ ಕಲಂ 144ರಡಿ ಕೆಲ ಷರತ್ತುಗಳನ್ನು ವಿಧಿಸಿ, ಭೀಮಾಶಂಕರ ಸಕ್ಕರೆ ಕಾರ್ಖಾನೆ ಸಿದ್ದೇಶ್ವರ ಗೋದಾಮಿನ ಸುತ್ತಲೂ – ಮೂತ್ತಲೂ 500 ಮೀಟರ್ ನಿಷೇಧಾಜ್ಞೆ ಜಾರಿ ಮಾಡಿ ಉಪವಿಭಾಗ ಅಧಿಕಾರಿ ಅಬೀದ್ ಗುರುವಾರ ಆದೇಶ ಹೊರಡಿಸಿದ್ದಾರೆ.

ನೂತನ ಚಡಚಣ ತಾಲೂಕಿನ ಮರಗೂರ ಗ್ರಾಮದ ವ್ಯಾಪ್ತಿಯಲ್ಲಿ ಬರುವ ಶ್ರೀ ಭೀಮಾಶಂಕರ ಸಹಕಾರಿ ಸಕ್ಕರೆ ಕಾರ್ಖಾನೆ ನಿ. ಮರಗೂರ, 13 ಜನ ಆಡಳಿತ ಮಂಡಳಿಯ ಸದಸ್ಯರ ಚುನಾವಣೆ ಪ್ರಕ್ರೀಯೆ ನಡೆದಿದ್ದು, ಆದ್ದರಿಂದ ಅದರಲ್ಲಿ 05 ಸ್ಥಾನಗಳ ಸದಸ್ಯರು ಅವಿರೋಧವಾಗಿ ಆಯ್ಕೆಯಾಗಿದ್ದು ಇನ್ನುಳಿದ 08 ಜನ ಸದಸ್ಯರು ಆಯ್ಕೆಯ ಹಿನ್ನೆಲೆಯಲ್ಲಿ ಫೆ.11 ರಂದು ಕಾರ್ಖಾನೆಯ ಆವರಣದಲ್ಲಿರುವ ಶ್ರೀ ಸಿದ್ದೇಶ್ವರ ಗೋದಾಮಿನಲ್ಲಿ ಚುನಾವಣೆ ಜರುಗಲಿದ್ದು, ಕಾರಣ ಕಾರ್ಖಾನೆಯ ಆಡಳಿತ ಮಂಡಳಿಯ ಸದಸ್ಯರ ಚುನಾವಣೆಯ ಕಾಲಕ್ಕೆ ಯಾವುದೇ ಅಹಿತಕರ ಘಟನೆಗಳು ಜರುಗದಂತೆ ಕಾನೂನು ಸುವ್ಯವಸ್ಥೆ ಕಾಪಾಡುವ ಸಲುವಾಗಿ ಶ್ರೀ ಭೀಮಾಶಂಕರ ಸಹಕಾರಿ ಸಕ್ಕರೆ ಕಾರ್ಖಾನೆಯ, ಸಿದ್ದೇಶ್ವರ ಗೊದಾಮಿನ ಸುತ್ತಮುತ್ತಲು 500 ಮೀಟರ್ ವ್ಯಾಪ್ತಿಯ ಒಳಗೆ ಫೆ. 10– ರಂದು ಸಾಯಂಕಾಲ: 05–00 ಗಂಟೆಯಿಂದ ಫೆ.12 ರ ಬೆಳಿಗ್ಗೆ 07–00 ಗಂಟೆಯ ವರೆಗೆ ದಂಡಪ್ರಕ್ರೀಯಾ ಸಂಹಿತೆ ಕಲಂ 144 ರಡಿ ನಿಷೇಧಾಜ್ಞೆ ಜಾರಿ ಮಾಡಲಾಗಿದೆ.

ಭೀಮಾಶಂಕರ ಸಹಕಾರಿ ಸಕ್ಕರೆ ಕಾರ್ಖಾನೆ ನಿ. ಮರಗೂರ, ಆಡಳಿತ ಮಂಡಳಿಯ ಸದಸ್ಯರ ಚುನಾವಣೆ ಪ್ರಕ್ರೀಯೆಯಲ್ಲಿ ಯಾವುದೇ ಅಹಿತಕರ ಘಟನೆ ಸಂಭವಿಸದಂತೆ ಮುಂಜಾಗೃತ ಕ್ರಮವಾಗಿ ಸದರ ಕಾರ್ಖಾನೆಯ "ಸಿದ್ದೇಶ್ವರ ಗೊದಾಮಿನ" ಸುತ್ತಮುತ್ತಲು 500 ಮೀಟರ್ ವ್ಯಾಪ್ತಿಯ ಒಳಗೆ ಈ ಮೇಲೆ ತಿಳಿಸಿದ ದಿನಾಂಕ ಹಾಗೂ ಸಮಯದಂದು ದಂಡಪ್ರಕ್ರೀಯಾ ಸಂಹಿತೆ ಕಲಂ 144 ರಡಿ ನಿಷೇಧಾಜ್ಞೆ ಜಾರಿಗೊಳಿಸಲಾಗಿದೆ.

**Printed by:** AVINASH BIDARI, **Published and Onwed by:** SHAILA INDUSHEKHAR MANUR **Printed at:** ARUN OFFSET PRINTERS,No.23, Sanjaygandhi Nagar, Indi Road, Vijayapura - 586101, Vijayapura Dist., Karnataka. **Published at:** At No.14, Silk City, Near Varasiddi Vinayaka Temple, Atalatti Link Road, Vijayapura -586102, Vijayapura Dist., Karnataka..**Editor :** INDUSHEKHAR MANUR